

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SK NEWS ಕನ್ನಡ

SIHI KAHI
KANNADA DAILY MORNING
BAGALKOT

Volume : 07 Issue : 303 Saturday 16-08-2025 E-mail : maruti.b.hosamani76@gmail.com Page: 4 Price : Rs. 1/-


# ಒಳ ಮೀಸಲಾತಿ ಸಹೋದರ ಸಮುದಾಯಗಳ ನಡುವೆ ಗೊಂದಲ ಸೃಷ್ಟಿಸಿದ ಸರ್ಕಾರ – ಸುರೇಶ ಚಲವಾದಿ ಆರೋಪ

**ಸಿಹಿ ಕಹಿ ಸುದ್ದಿ,**
**ಗದಗ :** ಒಳ ಮೀಸಲಾತಿ ಜಾರಿ ವಿಚಾರದಲ್ಲಿ ಸಹೋದರ ಸಮುದಾಯಗಳ ನಡುವೆ ರಾಜ್ಯ ಸರ್ಕಾರ ಗೊಂದಲ ಸೃಷ್ಟಿಸಿ ಕಾಲಹರಣ ಮಾಡುತ್ತಿದೆ ಎಂದು ಬಿಜೆಪಿ ಎಸ್ಸಿ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ.ವಾಯ್ ಚಲವಾದಿ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಸುಧೀರ್ಘ 35 ವರ್ಷಗಳ ಕಾಲ ಅಸ್ಪೃಶ್ಯತೆ ಸಮುದಾಯಗಳು ತಮ್ಮ ಹಕ್ಕುಗಳಿಗಾಗಿ ಬೀದಿಗಿಳಿದು ಹೋರಾಡುತ್ತಾ ಬಂದಿರುತ್ತದೆ. ಅಷ್ಟೇ ಅಲ್ಲದೇ ಹೋರಾಟದಲ್ಲಿ ಭಾಗಿಯಾದ ಅನೇಕ ಜನ ಸಮುದಾಯಕ್ಕಾಗಿ ಪ್ರಾಣ ಕಳೆದು ಕೊಂಡಿದ್ದಾರೆ. ಹೋರಾಟಗಾರರ ಪ್ರಾಣಕ್ಕೂ ಬೆಲೆ ಕೊಡದ ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿ ಮಾಡದೇ ಒಂದಿಲ್ಲೊಂದು ಕಾರಣಗಳನ್ನ ಹುಡುಕುತ್ತಾ ಬಂದು ಶೋಷಿತ ಸಮುದಾಯಗಳಿಗೆ ವಂಚಿಸಿದೆ.

ಕಳೆದ ಅವಧಿಯಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಸನ್ಮಾನ್ಯ ಬಸವರಾಜ ಬೊಮ್ಮಾಯಿ ನೇತ್ರತ್ವದ ಬಿಜೆಪಿ ಸರ್ಕಾರ ನಿವೃತ್ತ ನ್ಯಾಯ ಮೂರ್ತಿ ಎ.ಜೆ ಸದಾಶಿವ ಆಯೋಗದ ವರದಿಯನ್ನು ಅಂಗೀಕರಿಸಿ ಕೇಂದ್ರ ಸರ್ಕಾರಕ್ಕೆ ಸಿಫಾರಸ್ಸು ಮಾಡಿತ್ತು. ಸದಾಶಿವ ಆಯೋಗದ ವರದಿ ಎಲ್ಲಾ ಸಮುದಾಯದ ಜಾತಿ ಜನ ಸಂಖ್ಯಾವಾರು ಮೀಸಲಾತಿ ಕಲ್ಪಿಸಿ ಸಾಮಾಜಿಕ ನ್ಯಾಯ ಒದಗಿಸುವಲ್ಲಿ ಪೂರಕವಾಗಿತ್ತು.



ಇಂತಹ ವರಧಿಯನ್ನ ತಿರಸ್ಕರಿಸಿದ ರಾಜ್ಯ ಕಾಂಗ್ರೆಸ್ ಸರ್ಕಾರ ಸುಪ್ರೀಂ ಕೋರ್ಟ್ನ ಮೆಟ್ಟಿಲೇರಿತ್ತು. ಆದರೆ ಸುಪ್ರೀಂ ಕೋರ್ಟ್ನ ಮುಖ್ಯ ನ್ಯಾಯಾಧೀಶರಾದ ಚಂದ್ರಚೂಡ್ ಅವರ 7 ಸದಸ್ಯರನ್ನೊಳ ಗೊಂಡ ಏಕ ಸದಸ್ಯ ಪೀಠ ಒಳ ಮೀಸಲಾತಿ ಆಯಾ ರಾಜ್ಯ ಸರ್ಕಾರ ಹಂಚಿಕೆ ಮಾಡಬೇಕೆಂದು ಮಹತ್ವದ ತೀರ್ಪು ನೀಡಿತು. ಇದ–ರಿಂದಾಗಿ ಒಳ ಮೀಸಲಾತಿ ಹೋರಾಟಗಾರ ಸಹೋದರ ಸಮುದಾಯ ಬೀದಿಗಿಳಿದು ಹೋರಾಟ ಮಾಡಿದ ನಂತರ ಎಚ್ಚೆತ್ತು ಕೊಂಡ ಸರ್ಕಾರ ಜಸ್ಟಿಸ್ ನಾಗಮೋಹನ್ ದಾಸ್ ಆಯೋಗಕ್ಕೆ ವರಧಿ ನೀಡುವಂತೆ ಸೂಚಿಸಿತು.

ಆದರೆ ಕಳೆದ ಮೂರ್ನಾಲ್ಕು ತಿಂಗಳಿಂದ ರಾಜ್ಯದಾದ್ಯಂತ ಜಾತಿ ಜನ ಗಣತಿ ಸರ್ವೇಯಲ್ಲಿ ಂಃಅಆಇ ಎಂಬ ವಿಭಾಗಗಳನ್ನ ಮಾಡಿ ಜಾತಿ ಜಾತಿಗಳ ನಡುವೆ ದ್ವೇಷ ಭಾವನೆ ಮೂಡಿಸಿ ಪರ ವಿರೋಧದ ನಡುವೆ ಪಲಾಯನ ಮಾಡಲು ಅನುಕೂಲಕರವಾದ ವಾತಾವರಣ ಸೃಷ್ಟಿಸಿಕೊಂಡ ರಾಜ್ಯ ಸರ್ಕಾರ ಡಾ, ಬಾಬಾ ಸಾಹೇಬ್ ಅಂಬೇಡ್ಕರ್ ಕಾಲ ದಿಂದಲೂ ಹಿಡಿದು ಪ್ರಸ್ತುತ ದಿನಮಾನದ ವರೆಗೆ ದಲಿತರಿಗೆ ವಂಚಿಸುತ್ತಾ ಬಂದಿದೆ ಎಂದು ಕಿಡಿಕಾರಿದರು.

ಎಡ ಬಲ ಸಮಬಲ ಎಂಬ ಸಹೋದರತ್ವ ಭಾವನೆಯಿಂದಿದ್ದಚಲವಾದಿಮತ್ತುಮಾದಿಗ ಸಮುದಾಯಗಳ ಆಂತರಿಕ ಮುನಿಸುಗಳಿಗೆ ತೆರೆ ಎಳೆದು ಗೌರವಾನ್ವಿತ ಜಸ್ಟಿಸ್ ನಾಗಮೋಹನ್ ದಾಸ್ ಅವರು ಸಲ್ಲಿಸಿರುವ ವರದಿಯಲ್ಲಿ ಇದೇ ಅಂತಿಮವಲ್ಲಾ ಕಾಲಕ್ಕೆ ತಕ್ಕ ಹಾಗೆ ಜಾತಿ ಜನ ಸಂಖ್ಯಾವಾರು ತಿದ್ದುಪಡಿ ಮಾಡಲು ಅವಕಾಶವಿದೆ ಎಂದು ಸ್ಪಷ್ಟ ಪಡಿಸಿರುವದನ್ನ ಸ್ವಾಗತಿಸಿ ವೈಜ್ಞಾನಿಕ ವರದಿಗೆ ಬೆಂಬಲಿಸುವದರ ಜೊತೆಗೆ ಸಹೋದರ ಸಮುದಾಯಗಳ ಮಧ್ಯೆ ಸಂಘರ್ಷ ಸೃಷ್ಟಿಸಿ ಒಳ ಮೀಸಲಾತಿ ಜಾರಿಯಲ್ಲಿ ಪಲಾಯನ ಮಾಡುತ್ತಿರುವ ರಾಜ್ಯ ಸರ್ಕಾರದ ಮೃಧು ಧೋರಣೆಗೆ ಅವಕಾಶ ಕೊಡದೇ ಒಕ್ಕೊರಿಲಿಂದ ಒಳ ಮೀಸಲಾತಿ ಜಾರಿಗಾಗಿ ಆಗ್ರಹಿಸ ಬೇಕಾಗಿದೆ. ಒಳ ಮೀಸಲಾತಿ ನಮ್ಮ ಸಂವಿಧಾನ ಬದ್ದ ಹಕ್ಕು ಆ ಹಕ್ಕುಗಳನ್ನ ಪಡೆಯುವುದು ಗೋಕ್ಕೋಸ್ಕರ ಸಹೋದರ ಸಮುದಾಯ ದೊಂದಿಗೆ ಕೈ ಜೋಡಿಸುವ ಅವಷ್ಯಕತೆ ಇದೆ ಅಷ್ಟೇ ಅಲ್ಲದೇ ಒಳ ಮೀಸಲಾತಿ ಈ ಕೂಡಲೇ ಜಾರಿಯಾಗ ಬೇಕೆಂಬುದು ಕೂಡಾ ನನ್ನ ಸ್ಪಷ್ಟವಾದ ನಿಲುವು. ಏಕೆ–ಂದರೆ ಒಳ ಮೀಸಲಾತಿ ಜಾರಿಯಾಗುವ ವರೆಗೂ ಯಾವುದೇ ಬ್ಯಾಕ್ ಲಾಗ್ ಹುದ್ದೆಗಳನ್ನ ತುಂಬಿ ಕೊಳ್ಳಬಾರದೆಂಬ ಷರತ್ತಿರುವದರಿಂದ ದಲಿತ ಹಾಗೂ ಅನ್ಯ ಜಾತಿಯ ಸಹೋದರರು ತಮ್ಮ ವಿದ್ಯಾಭ್ಯಾಸ ಮುಗಿಸಿ ಉದ್ಯೋಗಕ್ಕಾಗಿ ಕಾಯುತ್ತಿದ್ದಾ–ರೆ. ಕಾಲ ಗತಿಸಿ ಹೋದಂತೆಲ್ಲಾ ಯುವ ಸಮುದಾಯದ ವಯಸ್ಸು ಮೀರಿ ಉದ್ಯೋಗದಿಂದ ವಂಚಿರಾಗುವ ಸಂಭವವಿರುತ್ತದೆ. ಕೆಲವು ಉಳಿದ ಜಾತಿಗಳಲ್ಲಿಯೂ ಬಡವರಿರುತ್ತಾರೆ ಕಷ್ಟ ಪಟ್ಟು ವಿದ್ಯೆ ಕಲಿತು ಅವಕಾಶ ವಂಚಿತರಾದರೆ ಮಾನಸಿಕವಾಗಿ ಖಿನ್ನತೆ ಗೊಳಗಾಗುವ ಸಾಧ್ಯತೆಗಳಿರುತ್ತದೆ. ಅಷ್ಟೇ ಅಲ್ಲದೇ ಅವರನ್ನೇ ಅವಲಂಬಿಸಿರುವ ಕುಟುಂಬಗಳು ಬೀದೀ ಪಾಲಾಗುತ್ತವೆ.

ಎಲ್ಲಾ ಜಾತಿಯ ಯುವ ಸಮುದಾಯದ ಮುಂದಿನ ಭವಿಷ್ಯಕ್ಕಾಗಿ ಒಳ ಮೀಸಲಾತಿ ಕೂಡಲೇ ಜಾರಿಯಾಗ ಬೇಕಾಗಿದೆ. ಆದಕಾರಣ ನನ್ನ ಸಮುದಾಯದ ಪ್ರಜ್ಞಾವಂತ ನಾಗರೀಕ ಬಂಧುಗಳಲ್ಲಿ ನನ್ನ ನಿವೇದನೆ ಏನೆಂದರೆ ಎಲ್ಲಾ ಜಾತಿಯ ಯುವ ಸಮುದಾಯದ ಭವಿಷ್ಯಕ್ಕೋಸ್ಕರ ಒಳ ಮೀಸಲಾತಿ ಜಾರಿಗಾಗಿ ಬೆಂಬಲಿಸೋಣ. ಜಾತಿ ಜನ ಸಂಖ್ಯೆಗನುಗುಣವಾಗಿ ನಮ್ಮ ಸಹೋದರ ಸಮುದಾಯಕ್ಕೆ ಸ್ವಲ್ಪ ಮುನ್ನಡೆಯಾದರೂ ಮುಕ್ತ ಮನಸ್ಸಿನಿಂದ ಸ್ವಾಗತಿಸಿ ಒಳ ಮೀಸಲಾತಿ ಜಾರಿಗಾಗಿ ಒಕ್ಕೊರಿಲಿನಿಂದ ಒತ್ತಾಯಿಸೋಣ ವೆಂದು. ಬಿಜೆಪಿ ಎಸ್ಸಿ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ.ವಾಯ್ ಚಲವಾದಿ ಒಳ ಮೀಸಲಾತಿ ಜಾರಿಗಾಗಿ ಬೆಂಬಲ ಸೂಚಿಸಿದರು ಎಂದು ವರದಿಯಾಗಿದೆ.

# ಹುತಾತ್ಮ ಯೋಧರ ಪುತ್ತಳಿಗೆ ಮಾಲಾರ್ಪಣೆ ಸಮರ್ಪಣೆ – ಮಾಡುವ ಮೂಲಕ 79 ನೇ. ಸ್ವಾತಂತ್ರೋತ್ಸವ ಆಚರಣೆ



**ಸಿಹಿ ಕಹಿ ಸುದ್ದಿ,**
**ಮಾನ್ವಿ :** ಲಂಚ ಮುಟ್ಟುವ ಕೈಯಲ್ಲಿ ರಾಷ್ಟ್ರ ಧ್ವಜ ಮುಟ್ಟಬೇಡಿ, ಭ್ರಷ್ಟರನ್ನು ಹೊಗಳುವ ಬಾಯಲ್ಲಿ ರಾಷ್ಟ್ರಗೀತೆ ಆಡ್ಬೇಡಿ ಹಾಗೆ ನಮ್ಮ ತಾಲೂಕಾಡಳಿತ ಜನ ಪ್ರತಿನಿಧಿಗಳು ಶಿಕ್ಷಣ ಸಂಸ್ಥೆಗಳು ಸಂಘ ಸಂಸ್ಥೆಗಳು ನಮ್ಮ ಹುತಾತ್ಮ ಯೋಧನ ಪುತ್ತಳಿಗೆ ಮಾಲಾರ್ಪಣೆ ಮಾಡುವ ಪದ್ಧತಿ ಅಳವಡಿಸಿ ಕೊಳ್ಳಬೇಕೆಂದು ಕೆ.ಆರ್.ಎಸ್ ಪಕ್ಷದ ತಾಲೂಕ ಅಧ್ಯಕ್ಷರಾದ ರಮೇಶ್ ನಾಯಕ್ ತಮ್ಮ ಅನಿಸಿಕೆಯಲ್ಲಿ ಎಲ್ಲರನ್ನು ಎಚ್ಚರಿಸಿದರು.



ಈ ದಿನ 79 ನೇ. ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ ಹುತಾತ್ಮ ಯೋಧನ ಕಂಚಿನ ಪುತ್ತಳಿಗೆ ಮಾಲಾರ್ಪಣೆ ಪೂಜಾ ಕಾರ್ಯಕ್ರಮ ಮಾಜಿ ಯೋಧರಾದ ಡಿ.ಹನುಮಂತನ ಸಲಾಪುರ್ ನೆರವೇರಿಸಿದರು. ನಂತರ ಮಾತನಾಡಿದ ಮಾಜಿ ಯೋಧರ ತಾ ಅಧ್ಯಕ್ಷರಾದ ಬಸವರಾಜ.ಮುಸ್ಟೂರ ಸ್ವಾತಂತ್ರ್ಯ ಕ್ಕೋಸ್ಕರ ವೀರ ಮರಣವನ್ನಪ್ಪಿದ ಎಲ್ಲಾ ಹಿರಿಯ ಸೇನಾನಿಗಳನ್ನು ನಾವು ನೆನಪಿಸಲೇ ಬೇಕು ಇಲ್ಲವಾದರೆ ನಮ್ಮ ಜೀವನ ವ್ಯರ್ಥ ಅದಕ್ಕಾಗಿ ಹಿರಿಯ ಸೇನಾನಿಗಳ ಆದರ್ಶ ನಮ್ಮಲ್ಲಿ ಅಳವಡಿಸಿ ಕೊಳ್ಳ ಬೇಕೆಂದರು ಈ ಸಂದರ್ಭದಲ್ಲಿ ಸಾದಾಪುರ ಗ್ರಾಮದ ಯುವ ಮುಖಂಡರು ಹಾಗೂ ಮಂಜುನಾಥನ ಕುಟುಂಬ ದವರು ಗ್ರಾಮದ ಶಾಲೆಯ ಮಕ್ಕಳು ಕೆ.ಆರ್.ಎಸ್ ಪಕ್ಷದ ಕಾರ್ಯಕರ್ತರು ಹಾಗೂ ಮಾಜಿ ಯೋಧರಾದ ಜೆಲ್ಲಿ ಆಂಜನೇಯ್ಯ ನೀರಮಾನ್ವಿ ಓಬಳೇಶ್ ಸುಂಕೇಶ್ವರ್ ತಾಂಡ ಹಾಗೂ ಹಾಲಿ ಯೋಧರಾದ ಬಸವರಾಜ ಸಾದಪುರ ಜೆಲ್ಲಿ ಸಂಜೀವ ನಾಯಕ ಕೆ ಶರಣಬಸವ ನಾಯಕ ಲಘು ವಾಹನ ಚಾಲಕರ ಸಂಘದ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿದ್ದು ಸ್ವಾತಂತ್ರ ದಿನಾಚರಣೆ ವಿಜೃಂಭಣೆ ಯಿಂದ ಆಚರಣೆ ಮಾಡಲಾಯಿತು. ಮಂಜುನಾಥನ ಕುಟುಂಬಸ್ಥರು ಬಂದಂತ ಎಲ್ಲಾ ದೇಶ ಪ್ರೇಮಿಗಳಿಗೆ ಸಿಹಿ ಹಂಚಿ ಸಂಭ್ರಮಿಸಿದರು ಎಂದು ವರದಿಯಾಗಿದೆ.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

# ಗ್ರಾ.ಪಂ ಯಲ್ಲಿ 79 ನೇ. ಸ್ವಾತಂತ್ರ್ಯ ದಿನಾಚರಣೆ – ಅದ್ದೂರಿಯಿಂದ ಆಚರಣೆ

**ಸಿಹಿ ಕಹಿ ಸುದ್ದಿ,**
**ಯಲಗೋಡ :** ದೇವರ ಹಿಪ್ಪರಗಿ ತಾಲ್ಲೂಕಿನ ಭಾರತದ ಅತ್ಯಂತ ಮಹತ್ವವಾದ ಹಬ್ಬವೆಂದರೆ ಅದು ಭಾರತಕ್ಕೆ ಸ್ವಾತಂತ್ರ್ಯ ಬಂದ ದಿನ ಪ್ರತಿಯೊಂದು ಸರ್ಕಾರಿ ಇಲಾಖೆ ಹಾಗೂ ಸಂಘ ಸಂಸ್ಥೆಗಳಲ್ಲಿ ಸ್ವಾತಂತ್ರ್ಯ ದಿನಾಚರಣೆ ಮಾಡುತ್ತಾರೆ.





ತಾಲ್ಲೂಕಿನ ಯಲಗೋಡ ಗ್ರಾಮ ಪಂಚಾಯತಿಕಾರ್ಯಾಲಯದಲ್ಲಿ ಇಂದು ನಡೆದ 79. ನೇಯ ಸ್ವಾತಂತ್ರ್ಯೋತ್ಸವದ ದಿನಾಚರಣೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ರೂಪಾಶ್ರೀ. ಚಂದ್ರಶೇಖರ ಅಸ್ಕಿಯವರು ಧ್ವಜಾರೋಹಣ ನೆರವೇರಿಸಿದರು. ಹಾಗೂ ವೆಂಕಟೇಶ್ವರ ಪ್ರೌಢ ಶಾಲೆಯಲ್ಲಿ ಗ್ರಾಮದ ಗಣ್ಯರಾದ ಅಣ್ಣಪ್ಪಗೌಡ ಪಾಟೀಲ ಇವರಿಂದ ಧ್ವಜಾರೋಹಣ ಮಾಡಿದರು. ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಮಲ್ಲಿಕಾರ್ಜುನ ದೂಡ್ಡಮನಿ ಇವರಿಂದ ಧ್ವಜಾರೋಹಣ ಮಾಡಿದರು. ಹಾಗೂ ವಿವಿಧೋದ್ದೇಶ ಕೃಷಿ ಪತ್ತಿನ ಸಹಕಾರಿ ಬ್ಯಾಂಕಿನ ಅಧ್ಯಕ್ಷರಾದ ಸಾಯಬಣ್ಣ ಬಾಗೇವಾಡಿ ಯವರಿಂದ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿದರು. ಹಾಗೂ ಸಂಗೊಳ್ಳಿ ರಾಯಣ್ಣನವರ ಸರ್ಕಲ್ ಹತ್ತಿರ ಸ್ವಾತಂತ್ರ್ಯ ದಿನಾಚರಣೆ ಮಾಡಿದರು. ಗ್ರಾಮದ ಉರ್ದು ಪ್ರಾಥಮಿಕ ಶಾಲೆಯಲ್ಲಿ ಬಸರಿ ವಸ್ತಿ ಶಾಲೆಯಲ್ಲಿ ತಾಂಡಾ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಹಾಗೂ ವಿವಿಧ ಸಂಘ ಸಂಸ್ಥೆಗಳಲ್ಲಿ, ಸ್ವಾತಂತ್ರ್ಯೋತ್ಸವದ ದಿನಾಚರಣೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಅಣ್ಣಪ್ಪಗೌಡ ಪಾಟೀಲ, ರಾಜಪಟೇಲ್ ಕಣಮೇಶ್ವರ ಬಾಬು ಕೇತ್ನಾಳ ಸಾಯಬಣ್ಣ ಬಾಗೇವಾಡಿ ಹುಯೋಗಿ ತಳ್ಳೋಳ್ಳಿ ಇವರು ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಶಿವಾನಂದ ಹಡಪದ ಪಿಕೆಪಿಎಸ್ ಬ್ಯಾಂಕಿನ ಮುಖ್ಯಕಾರ್ಯನಿರ್ವಾಹಕರಾದ ಮಡಿವಾಳಪ್ಪ ಹಿಕ್ಕನಗುತ್ತಿ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಬಸವಂತ ಉಣಿಬಾಯಿ ಹಾಗೂ ಗ್ರಾಮ ಪಂಚಾಯತಿ ಸದಸ್ಯರು, ಮಹಮ್ಮದ ರಫೀಕ್ ಕಣಮೇಶ್ವರ ಬೂತಾಳಿ ಇಂಗಳಗಿ ಶಿವಶಂಕರ ಬೂದಿಹಾಳ ಶೇಖಪ್ಪ ಹಿರೇಕುರಬರ, ಮಶಾಖ ನಧಾಪ್, ಅಪುಗೌಡ ಬಿರಾದಾರ ಬಸಲಿಂಗಪ್ಪ ಜ್ಯಾಯಿ ಪ್ರಕಾಶ ರಾಠೋಡ,ಹಾಗೂ ಸಿಬ್ಬಂದಿಗಳು, ಪಿಕೆಪಿಎಸ್ ಉಪಾಧ್ಯಕ್ಷರಾದ ಬಸವರಾಜ ಇಂಗಳಗಿ, ಸದಸ್ಯರಾದ ರಾಜುಗೌಡ ಪಾಟೀಲ, ಸಂತೋಷ ಹಚ್ಯಾಳ ಬಾಬು ಕೇತ್ನಾಳ ಮಲ್ಲಕಪ್ಪ ಹಿರೇಕುರಬರ ಶಿವಾಪುತ್ರ ಬೂದಿಹಾಳ, ಹಾಗೂ ಸಿಬ್ಬಂದಿಗಳು, ಗ್ರಾಮದ ಪೂಜಾರಾದ ರಾಜಶೇಖರಯ್ಯ ಹಿರೇಮಠ, ಹಾಗೂ ಮುಖಂಡರಾದ ಚಂದ್ರಶೇಖರ ಅಸ್ಕಿ ಬಾಬು ಬಾಗೇವಾಡಿ ಮಾಂತೇಶ ಕೂಟನೂರ ಸೋಮಶೇಖರ್ ಹೂಸಮನಿ ಮಾಂತೇಶ ತಳ್ಳೋಳ್ಳಿ ಹಾಗೂ ಎಲ್ಲಾ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರು ವಿವಿಧ ಸಂಘಟನೆ ಮುಖಂಡರು, ಗ್ರಾಮದ ಹಿರಿಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು

**ತಾಲೂಕು ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಭೀಮಪ್ಪ.ಹಚ್ಯಾಳ.ದೇವರ ಹಿಪ್ಪರಗಿ**

# ಚಿರತೆಗಾಗಿ ಬೋನು ಅಳವಡಿಕೆ

**ಜಮಖಂಡಿ :** ತಾಲೂಕಿನ ಕೆ. ಡಿ. ಜಂಬಗಿಯ ತೋಟದ ಪರಿಸರದಲ್ಲಿ ಚಿರತೆಯೊಂದು ನಾಯಿಮರಿ ಮತ್ತು ಆಡನ್ನುತಿಂದುಹಾಕಿದ್ದು,ಚಿರತೆಯದೆ ಹೆಜ್ಜೆಯ ಗುರುತು ಎಂದು ಖಚಿತ ಪಡಿಸಿದ ಅರಣ್ಯ ಇಲಾಖೆಯ ಅಧಿಕಾರಿಗಳು ಚಿರತೆಯನ್ನು ಸೆರೆ ಹಿಡಿಯಲು ಬೋನಿನ ವ್ಯವಸ್ಥೆಯನ್ನು ಮಾಡಿದ್ದಾರೆ.



ಚಿರತೆಯ ಹೆಜ್ಜೆಗುರುತು ಪತ್ತೆಹಚ್ಚಿದ್ದ–ರಿಂದ ಗ್ರಾಮಸ್ಥರಲ್ಲಿ ಭೀತಿ ಆವ–ರಿಸಿದೆ. ಚಿರತೆಯ ಸೆರೆಗೆ ಆಯಕಟ್ಟಿನ ಸ್ಥಳದಲ್ಲಿ ಬೋನು ಅಳವಡಿಸಿ ಸೆರೆ ಹಿಡಿಯಲು ಅರಣ್ಯ ಸಿಬ್ಬಂದಿ ಸನ್ನದ್ಧವಾಗಿದೆ. ಚಿರತೆಯನ್ನು ಶೀಘ್ರದಲ್ಲಿಯೇ ಸೆರೆ ಹಿಡಿದು ಬೇರೆಡೆಗೆ ಸಾಗಿಸಲಾಗುವುದು.

ಗ್ರಾಮಸ್ಥರು ಆತಂಕ ಪಡಬಾರದೆಂದು ಅರಣ್ಯ ಸಿಬ್ಬಂದಿ ನಾಗರಿಕರಲ್ಲಿ ವಿಶ್ವಾಸ ಮೂಡಿಸಿದ್ದಾರೆ. ತೋಟದ ವಸ್ತಿಯಲ್ಲಿ ಕಾಣಿಸಿಕೊಂಡ ಚಿರತೆಯನ್ನು ಹಿಡಿಯಲು ಬೋನು ಅಳವಡಿಸಿದ್ದು,

ಬೋನಿನಲ್ಲಿ ಒಂದು ನಾಯಿಯನ್ನು ಕೂಡಿ ಹಾಕಿರುವುದರಿಂದ ನಾಯಿ ತಿನ್ನಲು ಸ್ಥಳಕ್ಕೆ ಚಿರತೆ ಬರುತ್ತದೆ. ಆವಾಗ ಚಿರತೆಯನ್ನು ಹಿಡಿಯಲು ಸಾಧ್ಯ ಎಂದು ವಲಯ ಅರಣ್ಯ ಇಲಾಖೆ ಅಧಿಕಾರಿ ಕಿರಣ ದಾಸರೆಡ್ಡಿ ತಿಳಿಸಿದರು.

# ನರ್ಸಿಂಗ್ ವಿದ್ಯಾರ್ಥಿಗಳ ಅತ್ಯುತ್ತಮ ಫಲಿತಾಂಶ

**ತೇರದಾಳ :** ರಾಜೀವ ಗಾಂಧಿ ಆರೋಗ್ಯ ವಿಶ್ವ ವಿದ್ಯಾಲಯ ನಡೆಸಿದ1,3ಹಾಗೂ5ನೇಸೆಮಿಸ್ಟರ್ ಪರೀಕ್ಷೆಯಲ್ಲಿ ತೇರದಾಳದ ದಾನಿಗೊಂಡ ಸಮೂಹ ಶಿಕ್ಷಣ ಸಂಸ್ಥೆಯ ದಾನಿಗೊಂಡ ಕಾಲೇಜ್ ಆಫ್ ನರ್ಸಿಂಗ್ ವಿಭಾಗದ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ.



ಒಂದು ಹಾಗೂ ಐದನೇ ಸೆಮಿಸ್ಟರ್ನಲ್ಲಿ ನೂರಕ್ಕೆ ನೂರರಷ್ಟು ಫಲಿತಾಂಶ ಪ್ರಕಟಗೊಂಡಿದ್ದು, ಮೂರನೇ ಸೆಮಿಸ್ಟರ್ನಲ್ಲಿ ಶೇ. 90 ರಷ್ಟು ಫಲಿತಾಂಶವಾಗಿದೆ. ಒಂದನೇ ಸಮಿಸ್ಟರ್ನಲ್ಲಿ ಮೇಘಾ ಎಂ, (82%), ಮೂರನೇ ಸೆಮಿಸ್ಟರ್ನಲ್ಲಿ ದಾನೇಶ್ವರಿ (86.67), ಹಾಗೂ ಐದನೇ ಸೆಮಿಸ್ಟರ್ನಲ್ಲಿ, ಅಮೃತಾ ಬಿ. (86.86) ಪ್ರಥಮ ಸ್ಥಾನ ಪಡೆದಿದ್ದು, ಕಾಲೇಜಿನ ಕೀರ್ತಿ ಹೆಚ್ಚಿಸಿದ ವಿದ್ಯಾರ್ಥಿಗಳನ್ನು ಚೇರಮನ್ ಡಾ. ಮಹಾವೀರ ದಾನಿಗೊಂಡ ಹೃದಯಾರೆ ಅಭಿನಂದಿಸಿದ್ದಾರೆ.

# ಹತ್ತು ಸಾವಿರ ನಿವೇಶನಗಳನ್ನು ವಿತರಿಸಲಾಗುವುದು: ಶಾಸಕ ಜಿ.ಹೆಚ್ ಶ್ರೀನಿವಾಸ್

**ಸಿಹಿ ಕಹಿ ಸುದ್ದಿ,**
**ತರೀಕೆರೆ :** ಅಭಿವೃದ್ಧಿಯಲ್ಲಿ ಬೇರೆ ರಾಜ್ಯಗಳಿಗೆ ಹೋಲಿಸಿದರೆ 90 ಪರ್ಸೆಂಟ್ ನಾವು ಮುಂದೆ ಬಂದಿದ್ದೇವೆ. ಎಂದು ಶಾಸಕರಾದ ಜಿ.ಎಚ್ ಶ್ರೀನಿವಾಸ್ ರವರು ಹೇಳಿದರು. ಅವರು ಇಂದು ಬಯಲು ರಂಗ ಮಂದಿರದಲ್ಲಿ ನಾಡ ಹಬ್ಬಗಳ ಸಮಿತಿ ಏರ್ಪಡಿಸಿದ್ದ ಸ್ವತಂತ್ರೋತ್ಸವ ದಿನಾಚರಣೆ–ಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಾನ್ಯ ಮುಖ್ಯ ಮಂತ್ರಿಯಾದ ಸಿದ್ದರಾಮಯ್ಯ ನವರು ಯಶಸ್ವಿಯಾಗಿ ಪಂಚ ಭಾಗ್ಯಗಳನ್ನು ನಿರ್ವಹಿಸಿದ್ದಾರೆ ಅವರು ಉತ್ತಮ ಆರ್ಥಿಕ ತಜ್ಞರು ಹೌದು ಎಂದು ಹೇಳಿದರು.ತರೀಕೆರೆಯ ಅಭಿವೃದ್ಧಿಗೆ 50 ಕೋಟಿ ಅನುದಾನವನ್ನು ಮಾನ್ಯ ಮುಖ್ಯಮಂತ್ರಿಗಳು ನೀಡಿದ್ದಾರೆ. ಕಂದಾಯ ಗ್ರಾಮಗಳನ್ನು ರಚಿಸ ಬೇಕು ಮತ್ತು ನಿವೇಶನ ರೈತರಿಗೆ 10,000 ಜನರಿಗೆ ನಿವೇಶನ ನೀಡಲಾಗುವುದು ಎಂದು ಹೇಳಿದರು. 8.5 ಕೋಟಿ ಅನುದಾನದಲ್ಲಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಪಡಿಸಲಾಗುವುದು ಮತ್ತು ಎಂಟು ಕೋಟಿ ಅನುದಾನದಲ್ಲಿ ಪುರ ಸಭೆ ಕಟ್ಟಡ ನಿರ್ಮಾಣ ಮತ್ತು ಕ್ರೀಡಾಂಗಣವನ್ನು ನಿರ್ಮಾಣ ಮಾಡಲಾಗುವುದು ತರೀಕೆರೆ ಪಟ್ಟಣದಲ್ಲಿ ಚತುರ್ಪಥ್ ರಸ್ತೆ ನಿರ್ಮಾಣಕ್ಕೆ ಮತ್ತೆ ಒಂದು ಕೋಟಿ ಅನುದಾನ ಬಿಡುಗ–



'ಡೆ ಮಾಡಲಾಗಿದೆ. ಸ್ವತಂತ್ರ ಪಡೆಯಲು ಗಾಂಧೀಜಿ ಮುಂತಾದ ರಾಷ್ಟ್ರ ನಾಯಕರು ಹೋರಾಟದ ಫಲ ಸ್ವಾತಂತ್ರ್ಯ ಲಭಿಸಿದೆ ನಮ್ಮ ತರೀಕೆರೆಯಲ್ಲಿ ಹಂಜಿ ವೀರಪ್ಪ, ಹಂಜಿ ಶಿವಣ್ಣ ಅಜ್ಜಂಪುರದಲ್ಲಿ ಸತ್ಯನಾರಾಯಣ ಶ್ರೇಷ್ಠ ಮುಂತಾದವರು ಸ್ವತಂತ್ರ ಸಂಗ್ರಾಮದಲ್ಲಿ ಭಾಗವಹಿಸಿದ್ದರು. ಇಂದು ಸಂಗೊಳ್ಳಿ ರಾಯಣ್ಣ ರವರ ಜನ್ಮ ದಿನವನ್ನು ಸಹ ನಾವು ಆಚರಣೆ ಮಾಡಿದ್ದೇವೆ. ಮಕ್ಕಳು ದೊಡ್ಡ ದೊಡ್ಡ ಗುರಿಗಳನ್ನು ಕನಸುಗಳನ್ನು ಕಾಣಬೇಕು ಗುರಿಯನ್ನು ಸಾಧಿಸಬೇಕು ದೇಶದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಕರೆ ಕೊಟ್ಟರು. ರಾಷ್ಟ್ರ ಧ್ವಜಾರೋಹಣ ಮಾಡಿದ ಮಾನ್ಯ ಉಪ ವಿಭಾಗ ಅಧಿಕಾರಿಗಳಾದ ಎನ್. ವಿ ನಟೇಶ್ ಸ್ವತಂತ್ರೋತ್ಸವದ ಸಂದೇಶ ನೀಡುತ್ತಾ. ಈ ದೇಶದ ಗೌರವಾನ್ವಿತ ಸ್ವತಂತ್ರ ಹೋರಾಟಗಾರರಾದ ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್, ಬಾಲಗಂಗಾಧರ ತಿಲಕ್, ವಲ್ಲಭಾಯ್ ಪಟೇಲ್, ಅಂಬೇಡ್ಕರ್ ಮುಂತಾದವರನ್ನು ಈ ಸಂದರ್ಭದಲ್ಲಿ ನಾವು ಸ್ಮರಿಸ ಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಸಾಧಕರಿಗೆ ಸನ್ಮಾನ ಮಾಡಿ ಗೌರವಿಸಿ ಮತ್ತು ಬಹುಮಾನ ವಿತರಣೆ ಮಾಡಲಾಯಿತು . ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಸದ್ವಿದ್ಯಾ ಶಾಲೆಯ ಮಕ್ಕಳಿಂದ ನಾಡಿನ ಸೈನಿಕರ ನೃತ್ಯ ರೂಪಕವನ್ನು ಮೆಚ್ಚಿ ಮಾಜಿ ಸೈನಿಕರ ಸಂಘದ ಮಿಲ್ಟ್ರಿ ಶ್ರೀನಿವಾಸ್, ದೇವೇಂದ್ರ ಎಸ್ ಹೆಚ್ ಕುಮಾರ್, ರವರು ಬಹುಮಾನ ವಿತರಿಸಿದರು. ಹಾಗೂ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ತರೀಕೆರೆಯ ವಾರ್ಡ್ ನಂಬರ್ 23 ರ ಸದಸ್ಯರು ಹಾಗೂ ಉಪಾಧ್ಯಕ್ಷರಾದ ಶ್ರೀಮತಿ ಪಾರ್ವತಮ್ಮ ತಿಮ್ಮಯ್ಯ ರವರು ಬಾಪೂಜಿ ಕಾಲೋನಿಯ 41 ಜನ ಮನೆ ನಿವೇಶನ ರಹಿತರಿಗೆ ಹಕ್ಕು ಪತ್ರ ವಿತರಿಸಿ ಬಹು ವರ್ಷಗಳ ಬೇಡಿಕೆಯನ್ನು ಈಡೇರಿಸಿದ್ದಾರೆ. ಈ ಸಂದರ್ಭದಲ್ಲಿ ಪುರ ಸಭಾ ಅಧ್ಯಕ್ಷರಾದ ವಸಂತ್ ಕುಮಾರ್ ಕವಾಲಿ ಹಾಗೂ ಶಾಸಕರಾದ ಜಿ.ಎಚ್ ಶ್ರೀನಿವಾಸ್ ಮತ್ತು ಉಪಾಧ್ಯಕ್ಷರಾದ ಪಾರ್ವತಮ್ಮ ತಿಮ್ಮಯ್ಯ ರವರಿಗೆ ಬಾಪೂಜಿ ಕಾಲೋನಿಯ ಸಾರ್ವಜನಿಕರಿಂದ ಸನ್ಮಾನಿಸಿ ಗೌರವಿಸಿ ಅಭಿನಂದಿಸಲಾಯಿತು. ಕಾರ್ಯಕ್ರಮದಲ್ಲಿ ತಹಸಿಲ್ದಾರ್ ವಿಶ್ವಜಿತ್ ಮೆಹ್ತಾ ಸ್ವಾಗತಿಸಿದರು, ವೇದಿಕೆಯಲ್ಲಿ ಪೊಲೀಸು ಉಪ ಅಧೀಕ್ಷಕರಾದ ಹಾಲುಮೂರ್ತಿ ರಾವ್ ವಿ ಎಸ್, ಕಾರ್ಯ ನಿರ್ವಹಣಾಧಿಕಾರಿ ಡಾ. ಆರ್ ದೇವೇಂದ್ರಪ್ಪ, ಪುರ ಸಭಾ ಮುಖ್ಯ ಅಧಿಕಾರಿ ಟಿಏ ವಿಜಯ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಪರಶುರಾಮಪ್ಪ ಎಚ್ಎ, ಹಾಗೂ ನೌಕರರ ಸಂಘದ ಅಧ್ಯಕ್ಷರು ಮುಂತಾದವರು ಉಪಸ್ಥಿತರಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎನ್. ವೆಂಕಟೇಶ್.ತರೀಕೆರೆ. ಚಿಕ್ಕಮಗಳೂರು**

# ವಚನಗಳು ಜನಸಾಮಾನ್ಯರ ನಾಡಿಮಿಡಿತಗಳಾಗಿವೆ

**ರಬಕವಿ–ಬನಹಟ್ಟಿ :** ವಚನಗಳು ಸಾಮಾನ್ಯ ಜನರ ನಾಡಿಮಿಡಿತಗಳಾಗಿ, ವೈಚಾರಿಕ ಮತ್ತು ವೈಜ್ಞಾನಿಕ ಮನೋಚಿಂತನೆಗೆ ತಮ್ಮ ಕಾಯಕದ ಮೂಲಕ ಮಹತ್ವ ನೀಡಿದವರು ಶಿವಶರಣ–ರೆಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ ಸಿದ್ದಪ್ಪ ಪಟ್ಟಿಹಾಳ ಹೇಳಿದರು.




ಇಲ್ಲಿನ ರಬಕವಿ–ಬನಹಟ್ಟಿ ತಾಲೂಕು ಪಂಚಾಯತ್ ಕಚೇರಿ ಆವರಣದಲ್ಲಿ ನಡೆದ ನುಲಿಯ ಚಂದಯ್ಯ ಅವರ ಜಯಂತಿ ಕಾರ್ಯಕ್ರಮದಲ್ಲಿ ಚಂದಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಹನ್ನೆರಡನೇ ಶತಮಾನದ ಕಾಲದಲ್ಲಿ ಭಾಷೆಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ನಮ್ಮಲ್ಲಿರುವ ಮೂಢ ನಂಬಿಕೆಗಳಿಗೆ ಜೋತು ಬೀಳದೆ ಆಧುನಿಕ ಭಾರತದ ನಿರ್ಮಾಣಕ್ಕೆ ಪ್ರಾಮುಖ್ಯತೆ ನೀಡಬೇಕು. ಕಾಯಕ ನಿಷ್ಠೆಯಲ್ಲಿ ನುಲಿಯ ಚಂದಯ್ಯರಂತಹ ಶರಣ–ರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಬಸವರಾಜ ಮುನ್ನೊಳ್ಳಿ, ಜಿ. ಜಿ. ಕುಲಗೋಡ, ಬಸವರಾಜ ಕಟಾವೆ, ಸದಾನಂದ ಅರೆನಾಡ, ಗಂಗಪ್ಪ ಸವದಿ, ವಿನಯ ಹಲ್ಯಾಳ, ಜ್ಯೋತಿ ಗೊಲಭಾಂವಿ, ಆಕಾಶ ಹೊಸಕೋಟಿ, ಪ್ರವೀಣ ಹಿಡಕಲ್, ವಿನಾಯಕ ಮಂಟೂರ, ಲಕ್ಷ್ಮಿ, ಅಶ್ವಿನಿ ಎಡೆಪ್ಪನ್ನವರ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

# ಕಾಯಕದ ಮೂಲಕ ಆತ್ಮೋನ್ನತಿ ಕಂಡವರು ನೂಲಿನ ಚಂದಯ್ಯ



**ರಬಕವಿ-ಬನಹಟ್ಟಿ :** ಹನ್ನೆರಡನೆಯ ಶತಮಾನದಲ್ಲಿ ನಡೆದ ಕಲ್ಯಾಣ ಕ್ರಾಂತಿಯ ನಂತರ ಶರಣರು ರಚಿಸಿದ ವಚನಗಳ ಕಟ್ಟುಗಳನ್ನು ಕಟ್ಟಿಕೊಂಡು ಅವುಗಳ ರಕ್ಷಣೆ ಮಾಡಿದವರಲ್ಲಿ ನೂಲಿ ಚಂದಯ್ಯ ಕೂಡಾ ಪ್ರಮುಖರು.

ಅವರು ಕಾಯಕ ಮಾಡುತ್ತ ದಾಸೋಹಕ್ಕೂ ಮಹತ್ವ ನೀಡಿದ್ದರು. ಕಾಯಕದ ಮೂಲಕ ಆತ್ಮೋನ್ನತಿಯನ್ನು ಕಂಡವರಾಗಿದ್ದರು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು. ಶನಿವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ನೂಲಿ ಚಂದಯ್ಯ ಜಯಂತ್ಯುತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.

ಚಂದೇಶ್ವರಲಿಂಗ ಎಂಬ ಅಂಕಿತದೊಂದಿಗೆ ವಚನಗಳನ್ನು ರಚನೆ ಮಾಡಿದ್ದು, ಇವರು ರಚಿಸಿದ 48 ವಚನಗಳು ಲಭ್ಯವಾಗಿದ್ದು, ಚಂದಯ್ಯನವರ ವಚನಗಳು ಕಾಯಕ ನಿಷ್ಠೆಯ ಬಗ್ಗೆ ಹೇಳುತ್ತವೆ. ಆದ್ದರಿಂದ ಸಮಾಜ ಬಾಂಧವರು ನೂಲಿ ಚಂದಯ್ಯನವರಂತೆ ಕಾಯಕ ಯೋಗಿಗಳಾಗಬೇಕು. ಸಮಾಜಬಾಂಧವರುಸಾಮಾಜಿಕವಾಗಿ,ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಪ್ರಗತಿಯನ್ನು ಹೊಂದಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ತಹಶೀಲ್ದಾರ್ ಗಿರೀಶ ಸ್ವಾದಿ, ಪೌರಾಯುಕ್ತ ರಮೇಶ ಜಾಧವ, ಸಮಾಜದ ಪ್ರಮುಖರಾದ ನಾಗರಾಜ ಭಜಂತ್ರಿ, ಯಶವಂತ ವಾಜಂತ್ರಿ, ಗೋಪಾಲ ಭಜಂತ್ರಿ, ಭೀಮಶಿ ಭಜಂತ್ರಿ, ಮಹಾದೇವ ಭಜಂತ್ರಿ, ಚೇತನ ಭಜಂತ್ರಿ ಸೇರಿದಂತೆ ರಬಕವಿ ಬನಹಟ್ಟಿ ತಾಲ್ಲೂಕಿನ ಭಜಂತ್ರಿ ಸಮಾಜದ ಹಲವಾರು ಮುಖಂಡರು ಪಾಲ್ಗೊಂಡಿದ್ದರು.

# ಮಕ್ಕಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸಿ: ಶಾಸಕ ಗುಡಗುಂಟಿ

**ಜಮಖಂಡಿ :** ಸರ್ಕಾರಿ ಶಾಲೆಗಳ ಮಕ್ಕಳ ಕಲಿಕಾಗುಣಮಟ್ಟವನ್ನುಹೆಚ್ಚಿಸುವಗುರುತರ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ದೇಶದ ಭವಿಷ್ಯವಾಗಿರುವ ಮಕ್ಕಳನ್ನು ಸತ್ಪ್ರಜೆಗಳಾಗಿ ರೂಪಿಸಬೇಕು ಎಂದು ತಿಳಿಸಿದರು. ಶನಿವಾರ ಶಾಂತಿನಗರದ ಪಿಎಂಶ್ರೀ ಸರಕಾರಿ ಉರ್ದು ಮಾದರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಕ್ರಮಾಂಕ ಆರರಲ್ಲಿನ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಮಿಶನ್ ಅಡಿಯಲ್ಲಿ ಶಾಲಾ ಬ್ಯಾಗ್, ಸ್ವೆಟರ್‌ಗಳನ್ನು ವಿತರಿಸಿ ಅವರು ಮಾತನಾಡಿದರು. ವಿಜ್ಞಾನ ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ಸ್ಪರ್ಧಾತ್ಮಕ ಯುಗಕ್ಕೆ ತಕ್ಕಂತೆ ಸರ್ಕಾರಿ ಶಾಲೆಯ ಮಕ್ಕಳು ಬೆಳೆಯಬೇಕು. ಬಾಲ್ಯದಲ್ಲೆ ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗದಿದ್ದರೆ ಅವರು ಬದುಕಿನುದ್ದಕ್ಕೂ ಪರಿತಪಿಸುವಂತಾಗುತ್ತದೆ. ಮಕ್ಕಳಿಗೆ ಬಾಲ್ಯದಲ್ಲಿಯೆ ಉತ್ತಮ ಶಿಕ್ಷಣ ನೀಡುವಲ್ಲಿ ಶಿಕ್ಷಕರು ಪ್ರಾಮಾಣಿಕವಾಗಿ




ಕಾರ್ಯ ನಿರ್ವಹಿಸಬೇಕೆಂದು ತಿಳಿಸಿದರು. ಶಾಲೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಸರ್ಕಾರಕ್ಕೆ ಮಾಹಿತಿ ನೀಡುವುದಾಗಿ ಹೇಳಿದರು. ಶಾಲೆಯ ಅಭಿವೃದ್ಧಿಗೆ ವೈಯಕ್ತಿಕವಾಗಿ 51 ಸಾವಿರ ರೂ. ಗಳ ದೇಣಿಗೆ ನೀಡಿದರು.

ವೇದಿಕೆಯ ಮೇಲೆ ಅಜಯ ಕಡಪಟ್ಟಿ, ಮಲ್ಲು ದಾನಗೌಡ, ಕಾಶಿಬಾಯಿ ಹೂಗಾರ, ಮಲ್ಲು ಮಠ, ಕುಶಾಲ ವಾಗ್ಮೋರೆ, ಮುಸ್ತಾಕ ಅಪರಾದ, ಮಂಜುರ ಅವಟಿ, ಶಬಾನಾ ಇನಾಮದಾರ, ಮುಖ್ಯ ಶಿಕ್ಷಕಿ ಭಾರತಿ ದೊಡಮನಿ, ಶ್ರೀಧರ ಕಂಬಿ, ವಶಿಮ್ ಹವಾಲ್ದಾರ, ರಫಿಕ ಬಾರಿಗಡ್ಡಿ, ರಫಿಕ ಕಲಾದಗಿ, ಆಶಿಫ ಮೋಮಿನ್, ಆಬೀದ ಕಲಾದಗಿ, ಅಸ್ಲಂ ಇನಾಮದಾರ ಹಾಗೂ ಇತರರು ಇದ್ದರು.

ಝುಡ್. ಪಿ. ಕೊಡತಿ ಸ್ವಾಗತಿಸಿದರು. ಸಂಜು ಪಂಚಾಲ ನಿರೂಪಿಸಿ ವಂದಿಸಿದರು.

# ಸರ್ವ ಇಂದ್ರಿಯಗಳಲ್ಲಿ ಕಣ್ಣು ಅಮೂಲ್ಯವಾದದ್ದು ಆನಂದರಾವ್ ನಾಯ್ಕ್



**ಹಳ್ಳೂರ :** ಮೂಡಲಗಿ ತಾಲೂಕು ಮುನ್ಯಾಳ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಪ್ರಾಯೋಜಿತ ಮೂಡಲಿಗಿ ತಾಲೂಕು ಹಾಗೂ ಬೆಳಕು ಕಣ್ಣಿನ ಆಸ್ಪತ್ರೆ ಮೂಡಲಗಿ ಸಹಯೋಗದೊಂದಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರ ಆಯೋಜನೆ ಮಾಡಲಾಗಿತ್ತು. ಕಾರ್ಯಕ್ರಮ ವನ್ನು ಊರಿನ ಹಿರಿಯರಾದ ಆನಂದ್ ರಾವ್ ನಾಯ್ಕ್, ಡಾ. ಕೆ ಎಚ್ ನಾಗರಾಳ್, ಕ್ಷೇತ್ರ ಯೋಜನಾಧಿಕಾರಿಗಳಾದ ರಾಜು ನಾಯಕ್* ರವರ ಉಪಸ್ಥಿತಿಯಲ್ಲಿ ದೀಪ ಬೆಳಗಿಸುವುದರ ಮುಖಾಂತರ ಚಾಲನೆ ನೀಡಲಾಯಿತು. ನಂತರದಲ್ಲಿ ವೈದ್ಯರಾದ ಡಾ.ಕೆ.ಎಚ್ ನಾಗರಾಳ ಅವರು ಮಾತನಾಡುತ್ತಾ ಕಣ್ಣುಗಳ ಮಹತ್ವ ಮತ್ತು ಕಣ್ಣಿನ ಆರೋಗ್ಯ ರಕ್ಷಣೆ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶ್ರೀಯುತ ಆನಂದ್ ರಾವ್ ನಾಯಕ್ ರವರು ಮಾತನಾಡಿ ಆರೋಗ್ಯ ಅತಿ ಅಮೂಲ್ಯವಾದದ್ದು ಆರೋಗ್ಯವಾಗಿ ಇರಬೇಕಾದರೆ* *ನಾವು ಸೇವಿಸುವ ಆಹಾರ ಪದ್ಧತಿಯ ಬಗ್ಗೆ ಗಮನಹರಿಸಬೇಕು. ಕಣ್ಣಿನ ಆರೋಗ್ಯವು ಕೂಡ ಆಹಾರ ಪದ್ಧತಿಯ ಮೇಲೆ ಅವಲಂಬಿತವಾಗಿದೆ ಎಂದು ಕಿವಿ ಮಾತನ್ನು ಹೇಳುತ್ತಾ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ* ಯೋಜನೆಯು ಸಮುದಾಯಕ್ಕೆ ನೀಡಿರುವ ಕೊಡುಗೆಗಳ ಬಗ್ಗೆ ವಿವರಿಸಿ ಪೂಜ್ಯರನ್ನು ಅಭಿನಂದಿಸಿದರು. ಕಾರ್ಯಕ್ರಮದಲ್ಲಿ ಬೆಳಕು ಕಣ್ಣಿನ ಆಸ್ಪತ್ರೆಯ ಸಿಬ್ಬಂದಿಗಳು, ವಲಯದ ಮೇಲ್ವಿಚಾರಕರಾದ ರವಿ, ಜ್ಞಾನವಿಕಾಸ ಸಮನ್ವಯ ಅಧಿಕಾರಿ ವಿಜಯಲಕ್ಷ್ಮಿ, ಸೇವಾಪ್ರತಿನಿಧಿ ರೇಣುಕಾ ಒಕ್ಕೂಟದ ಪದಾಧಿಕಾರಿಗಳು, ಸ್ವಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಸಮನ್ವಯಾಧಿಕಾರಿಗಳು ನಿರೂಪಿಸಿ, ವಂದಿಸಿದರು.

# ಚಿಮ್ಮಡದಲ್ಲಿ ಪೋಲಿಸ್ ಜನಸಂಪರ್ಕ ಸಭೆ

**ಚಿಮ್ಮಡ :** ದೇಶೀಯ ಸೊಗಡಿನ ಕಾರ್ಯಕ್ರಮ ಆಯೋಜಿಸಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಗಣೇಶ ಚತುರ್ಥಿಯನ್ನು ಸಾರ್ಥಕಗೊಳಿಸಬೇಕೆಂದು ಬನಹಟ್ಟಿ ಠಾಣಾಧಿಕಾರಿ ಶಾಂತಾ ಹಳ್ಳಿ ಹೇಳಿದರು.

ಗ್ರಾಮದ ಭಾವುಸಾಹೇಬರ ಮಠದಲ್ಲಿ ಶುಕ್ರವಾರ ರಾತ್ರಿ ಆಯೋಜಿಸಲಾಗಿದ್ದ ಶಾಂತಿಪಾಲನಾ, ಜನಸಂಪರ್ಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಬಾರಿ ಗ್ರಾಮದಲ್ಲಿ ಗಣೇಶೋತ್ಸವ ಹಾಗೂ ಶ್ರೀ ಪ್ರಭುಲಿಂಗೇಶ್ವರ ಕಿಚಡಿ ಜಾತ್ರೆ ಏಕಕಾಲದಲ್ಲಿ ಬಂದಿರುವುದರಿಂದ ಗಣೇಶೋತ್ಸವ ಐದು ದಿನಗಳಿಗೆ ಮೊಟಕುಗೊಳಿಸಿ ವಿಸರ್ಜನೆ ಮಾಡುವ ಮೂಲಕ ಜಾತ್ರೆಯನ್ನು ಯಶಸ್ವಿಗೊಳಿಸಬೇಕು ಸಾರ್ವಜನಿಕರಿಗೆ ತೊಂದರೆಯಾಗದಂತೆ ಸರಕಾರದ ಮಾರ್ಗಸೂಚಿ ಅನುಸರಿಸಿ ಶಾಂತರೀತಿಯಲ್ಲಿ ಹಬ್ಬ ಆಚರಿಸಲು ಮನವಿ



ಮಾಡಿದರು. ಗಣೇಶೋತ್ಸವಕ್ಕೆ ಹಲವು ಇಲಾಖೆಗಳ ಅನುಮತಿ ಪಡೆಯಲು ಏಕಗವಾಕ್ಷಿ ಪದ್ಧತಿಯನ್ನು ಠಾಣೆಯಲ್ಲಿ ಪ್ರಾರಂಭಿಸಲಿದ್ದು ಇದರ ಪ್ರಯೋಜನ ಪಡೆಯಬೇಕೆಂದರು.

ಶಿಕ್ಷಕ ಪ್ರಕಾಶ ಪೂಜಾರಿ ಮಾತನಾಡಿ, ಗ್ರಾಮದಲ್ಲಿ ನಡೆಯುವ ಯಾವುದೇ ಉತ್ಸವಗಳಲ್ಲಿ ಎಲ್ಲ ಸಮಾಜ ಬಾಂಧವರು ಪಾಲ್ಗೊಳ್ಳುವ ಮೂಲಕ ಶಾಂತಿ ಕಾಪಾಡಿ ಕೊಳ್ಳುತ್ತೇವೆಂದರು.

ಕಾರ್ಯಕ್ರಮದಲ್ಲಿ ಪ್ರೊಬೆಷನರಿ ಪಿಎಸ್‌ಐ ನಿಶಾ ವ್ಹಿ. ಗ್ರಾಮದ ಪ್ರಮುಖರಾದ ರಾಮಣ್ಣ ಮುಗಳಖೋಡ, ಬಾಳಪ್ಪಾ ಹಳಿಂಗಳಿ, ಅಣ್ಣಪ್ಪಗೌಡ ಪಾಟೀಲ, ಬೀರಪ್ಪ ಹಳೆಮನಿ, ರಾಚಯ್ಯ ಮಠಪತಿ, ದುಂಡಪ್ಪ ಪಾಟೀಲ, ಈಶ್ವರ ಬಡಿಗೇರ, ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಆನಂದ ಕವಟಿ, ಪ್ರಭು ಮುಧೋಳ, ಮಹಾಂತೇಶ ಜಾಲಿಕಟ್ಟಿ, ಪ್ರಭು ಗೋವಿಂದಗೋಳ, ರವಿ ದೊಡವಾಡ, ರುಸ್ತುಮ್ ಮಾಲದಾರ ಸೇರಿದಂತೆ ಎಲ್ಲ ಸಮಾಜದ ಮುಖಂಡರು ಗಣೇಶೋತ್ಸವ ಸೇವಾ ಸಮಿತಿಯ ಸದಸ್ಯರು ಪಾಲ್ಗೊಂಡಿದ್ದರು. ಬೀಟ್ ಸಿಬ್ಬಂದಿ ಆರ್. ಬಿ. ಪೂಜಾರಿ, ಬಿ. ಜಿ. ಹೂಗಾರ ಕಾರ್ಯಕ್ರಮ ನಿರ್ವಹಿಸಿದರು.

# ತಾಲೂಕಿನ ಸರಕಾರಿ ವಿವಿಧ ಇಲಾಖೆಗಳಿಗೆ ಲೋಕಾಯುಕ್ತರ ಭೇಟಿ

**ಜಮಖಂಡಿ :** ಇಲ್ಲಿಯ ವಿವಿಧ ಸರಕಾರಿ ಕಚೇರಿಯ ದಾಖಲಾತಿಗಳನ್ನು ಹಾಗೂ ಸಿಬ್ಬಂದಿಗಳ ಕೆಲಸದ ಕುರಿತು ವರದಿಯನ್ನು ಪರಿಶೀಲನೆ ನಡೆಸಿದರು.

ನಗರದ ತಹಶೀಲ್ದಾರ ಕಚೇರಿ, ನಗರಸಭೆ ಹೀಗೆ ಹಲವಾರು ಸರಕಾರಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಯಾವ ಹುದ್ದೆಗಳಲ್ಲಿ ಸೇವೆಯನ್ನು ಸಲಿಸಿ ಕಾರ್ಯ ನಿರ್ವಹಿಸುತ್ತಿದ್ದಾರೆಂದು ಪರಿಶೀಲನೆ ನಡೆಸಿದರು ಎಂದು ನಗರಸಭೆಯ ಸಿಬ್ಬಂದಿಗಳು ತಿಳಿಸಿದರು.

ನಗರಸಭೆಯಲ್ಲಿ ಕಾರ್ಯನಿರ್ವಹಿಸುವ ಕರ ವಸೂಲಾತಿ ಸಿಬ್ಬಂದಿಗಳನ್ನು ಹಾಗೂ ಲೆಕ್ಕಪತ್ರ ವಿಭಾಗದ ಸಿಬ್ಬಂದಿಗಳ ವಿಚಾರಣೆಯನ್ನು ನಡೆಸಿದರು.

ವಿಚಾರಣೆಯ ಸಮಯದಲ್ಲಿ ಲೆಕ್ಕಪತ್ರ ವಿಭಾಗದ ಸಿಬ್ಬಂದಿಗಳ ದಾಖಲಾತಿಗಳನ್ನು ಪರಿಶೀಲಿಸಿದ ಬಳಿಕ ಅವರು ಬಳಕೆ ಮಾಡುತ್ತಿರುವ ಮೊಬೈಲ್ಗಳನ್ನುವಶಕ್ಕೆ ಪಡೆದುಕೊಂಡು ಗೂಗಲ್ ಪೇ, ಹಾಗೂ ಫೋನ್ ಪೇ ಹೀಗೆ ಯಾರ ಬಳಿಯಲ್ಲಿ ಹಣಕಾಸಿನ ವ್ಯವಹಾರಗಳನ್ನು ಮಾಡಿದ್ದಾರೆ ಎಂಬುವುದರ ಬಗ್ಗೆ ಪರಿಶೀಲನೆ ನಡೆಸಿದ್ದಾರೆ.

# ತಾಲೂಕು ಮಟ್ಟದ ಟಾಸ್ಕ್ ಫೋರ್ಸ್: ಬಾಲಕಾರ್ಮಿಕ ದಾಳಿ, ವಿಶೇಷ ತಪಾಸಣೆ

**ಕೊಪ್ಪಳ :** ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಕೊಪ್ಪಳ ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆ ಹಾಗೂ ಬಾಲ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಲು ನಡೆಸಿದ ಬಾಲಕಾರ್ಮಿಕ ದಾಳಿ ಮತ್ತು ವಿಶೇಷ ತಪಾಸಣೆ ಕಾರ್ಯಾಚರಣೆಯ ನಡೆಸಲಾಯಿತು.

ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನವದೆಹಲಿ ಹಾಗೂ ಜಿಲ್ಲಾಧಿಕಾರಿಗಳು ಕೊಪ್ಪಳ ಹಾಗೂ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ" ಅಂಗವಾಗಿ ರಕ್ಷಣಾ ಅಭಿಯಾನ ಕಾರ್ಯಾಚರಣೆ ಆಯೋಜಿಸಲು ಸೂಚಿಸಿದ್ದರು. ಅದರಂತೆ ಬುಧವಾರ ಕೊಪ್ಪಳ ಜಿಲ್ಲೆಯಲ್ಲಿ ಕೊಪ್ಪಳ ತಹಶೀಲ್ದಾರ ವಿಠ್ಠಲ್ ಚೌಗಲಾ ಅವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಬಾಲಕಾರ್ಮಿಕ ಪುನರ್ವಸತಿ ಸಮಿತಿ ಸಭೆ ಹಾಗೂ ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ತಹಶೀಲ್ದಾರರು ಬಾಲಕಾರ್ಮಿಕ ರಕ್ಷಣೆ ಹಾಗೂ ಪುನರ್ವಸತಿ ಕುರಿತು ಮಾಹಿತಿ ನೀಡಿ, ಸಭೆಯಲ್ಲಿ ಹಾಜರಿದ್ದ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಕಾರ್ಯವ್ಯಾಪ್ತಿಯಲ್ಲಿ ಕಂಡು ಬಂದ ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಮಕ್ಕಳನ್ನು ಪತ್ತೆ ಹಚ್ಚಿ ಕೆಲಸದಿಂದ ಬಿಡುಗಡೆಗೊಳಿಸಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದರ



ಮೂಲಕ ಪುನರ್ವಸತಿಗೊಳಿಸಬೇಕು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಭೆಯಲ್ಲಿ ನೀಡಿದ ಮಾಹಿತಿ ಪ್ರಕಾರ ಶಾಲೆಯಿಂದ ಹೊರಗುಳಿದ 33 ಮಕ್ಕಳನ್ನು ಪುನ: ಶಾಲೆಗೆ ದಾಖಲಿಸುವುದ ಮೂಲಕ ಅವರನ್ನು ಪುನರ್ವಸತಿಗೊಳಿಸಬೇಕು ಹಾಗೂ ಎಲ್ಲಾ ಅಧಿಕಾರಿಗಳಿಗೆ ಮಕ್ಕಳ ಮಾಹಿತಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ ಸಿಬ್ಬಂದಿಗಳಿಗೆ ಒದಗಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು ಹಾಗೂ ಸಭೆಯಲ್ಲಿ ಹಾಜರಾಗದೇ ಇರುವ ಅಧಿಕಾರಿಗಳಿಗೆ ನೋಟಿಸ್ ನೀಡಲು ಸೂಚಿಸಿದರು.

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಎರಡು ತಂಡಗಳನ್ನು ರಚಿಸಿ ಬಾಲ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಲು ತಪಾಸಣೆ, ಹಠಾತ್ ದಾಳಿಗಳನ್ನು ತಹಶೀಲ್ದಾರರ ನೇತೃತ್ವದಲ್ಲಿ ಕೊಪ್ಪಳ ನಗರದ ವಿವಿಧ ಹೋಟೆಲ್, ಗ್ಯಾರೇಜ್, ಬೇಕರಿ ಅಂಗಡಿ, ಬಟ್ಟೆ ಅಂಗಡಿಗಳಲ್ಲಿ ಕೈಗೊಳ್ಳಲಾಯಿತು.

ಕೊಪ್ಪಳ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಅವರ ನೇತೃತ್ವದಲ್ಲಿ ಗ್ರಾಮೀಣ ಭಾಗದಲ್ಲಿ ತಪಾಸಣೆ ನಡೆಸಲು ಒಂದು ತಂಡ ಮಾಡಿ ತಪಾಸಣೆ ನಡೆಸಲಾಯಿತು. ಈ ತಂಡಗಳಲ್ಲಿ ಕಾರ್ಮಿಕ ನೀರೀಕ್ಷಕಿ ಮಂಜುಳಾ, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೋಟಗಾರ, ಕೊಪ್ಪಳ, ತಾಲೂಕು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮಂಜುಳಾ ಆರ್., ಕ್ಷೇತ್ರ ಶಿಕ್ಷಣ ಅಧಿಕಾರಿ ಹನುಮಂತಪ್ಪ ಹೆಚ್., ಪಿ.ಎಸ್.ಐ ಈರಪ ನಾಯಕ್, ಎ.ಎಸ್.ಐ ದೊಡ್ಡಯ್ಯ ಸಾಲಿಮಠ ಹಾಗೂ ಗ್ರಾಮೀಣ ಪೋಲಿಸ್ ಠಾಣೆಯ ಪೋಲಿಸ್ ಸಿಬ್ಬಂದಿಗಳು, ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕ ಜೀವನಸಾಬ, ಆರೋಗ್ಯ ನೀರೀಕ್ಷಕಿ ರಾಜೇಶ್ವರಿ ಹಾಗೂ ಮುನಿಸ್ವಾಮಿ, ಪ್ರಮೋದ ಆರ್.ಎಸ್ ಗುರಪ ಡಿ ಶರಣಪ್ಪ ಎಸ್. ಮತ್ತು ಮಕ್ಕಳ ಸಹಾಯವಾಣಿ-1098 ಸಿಬ್ಬಂಧಿಗಳು ಸೇರಿದಂತೆ ವಿವಿಧ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

ಈ ತಪಾಸಣೆಯಲ್ಲಿ ಕೆ.ಪಿ.ಆರ್ ಅಗ್ರೋ ಕೆಮಿಕಲ್ ಲಿಮಿಟೆಡ್ ಫ್ಯಾಕ್ಟರಿ, ಇಟ್ಟಂಗಿ ಭಟ್ಟಿ, ಕೋಳಿ ಫಾರಂ ಸೆರಿದಂತೆ ವಿವಿಧ ಸಂಸ್ಥೆಗಳಲ್ಲಿ ತಪಾಸಣೆಯನ್ನು ಕೈಗೊಳ್ಳಲಾಯಿತು. ಮತ್ತು ಕೊಪ್ಪಳ ನಗರದಲ್ಲಿ ವಿವಿಧ ವಾಣಿಜ್ಯ ಸಂಸ್ಥೆಗಳು ಗ್ಯಾರೇಜ, ಹೋಟೆಲ್, ಮತ್ತು ಬೇಕರಿಯೆಲ್ಲಿ ತಪಾಸಣೆ ಕೈಗೊಳ್ಳಲಾಗಿ, ಈ ಸಮಯದಲ್ಲಿ ಬೆಂಗಳೂರು ಬೇಕರಿ, ಕೊಪ್ಪಳ ಎಂಬ ಸಂಸ್ಥೆಯಲ್ಲಿ ಇಬ್ಬರು ಮಕ್ಕಳು, ಅಕ್ಬರ್ ಅಟೋ ವರ್ಕ್ಸ್, ಕೊಪ್ಪಳ ಎಂಬ ಸಂಸ್ಥೆಯಲ್ಲಿ ಒಂದು, ಬಸವೇಶ್ವರ ಕಿರಾಣಿ ಸ್ಟೋರ್ ಎಂಬ ಸಂಸ್ಥೆಯಲ್ಲಿ ಒಂದು ಹಾಗೂ ಆಸಿಫ್ ವರ್ಕ್ ಶಾಪ್ ಎಂಬ ಸಂಸ್ಥೆಯಲ್ಲಿ ಒಂದು ಕಿಶೋರ ಕಾರ್ಮಿಕ ಮಕ್ಕಳು ಕೆಲಸ ನಿರ್ವಹಿಸುತ್ತಿರುವುದು ಪತ್ತೆಯಾಗಿದ್ದು, ಈ ಎಲ್ಲಾ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ, ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಯಿತು ಮತ್ತು ಸಂಬಂಧಪಟ್ಟ ಮಾಲೀಕರ ಮೇಲೆ ಕಾನೂನಿನನ್ವಯ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಲಾಗುವುದು.

# ಶ್ರೀ ನುಲಿಯ ಚಂದಯ್ಯ ಜಯಂತಿ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ



**ಕೊಪ್ಪಳ :** ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಆಚರಿಸಲಾಯಿತು.

ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಅವರು ಶ್ರೀ ನುಲಿಯ ಚಂದಯ್ಯನವರ ಭಾವಚಿತ್ರಕ್ಕೆ ಪುಷ್ಪರೆ ಪಣ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೊರಮ ಸಮಾಜದ ಮುಖಂಡರಾದ ಎಸ್.ನಾಗರಾಜ ದೊಡ್ಡಮನಿ, ಕಂಬಣ್ಣ ಭಜಂತ್ರಿ, ಬಸವರಾಜ ಓಜಿನಹಳ್ಳಿ, ತಿಮ್ಮಣ್ಣ ಪೂಜಾರ, ಲಕ್ಷ್ಮಣ ಹಾಲಹಳ್ಳಿ, ಹಂಚೆಳಪ್ಪ ಓಜಿನಹಳ್ಳಿ, ತಿಮ್ಮಣ್ಣ ಭಜಂತ್ರಿ, ಲಕ್ಷ್ಮಣ ಮಾಳಗಿ, ನಾಗರಾಜ ಕೊಪ್ಪಳ, ನಾಗರಾಜ ದೊಡ್ಡಮನಿ, ಶಂಕ್ರಪ ಎಸ್.ಡಿ., ಗಂಗಾಧರ ಗದಗಿನಮನಿ, ಕಣದಪ್ಪ ಕವಲೂರು, ಹುಸೇನಮ್ಮ ದೊಡ್ಡಮನಿ, ರತ್ನ ಎಸ್.ಡಿ., ಪುರುಗಮ್ಮ, ಸುನೀತಾ ಮತ್ತು ಇನ್ನೂ ಹಲವಾರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಿಬ್ಬಂದಿ ಶಂಕರ್ ಮಹಮನಿ ಹಾಗೂ ಮುತ್ತಣ್ಣ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಅಸೂಟಿ ಶ್ರೀನಿವಾಸಗೆ ರಾಜ್ಯ ಮಟ್ಟದ ಉತ್ತಮ ನಾಟಕ ಕಲಾ ಸೇವರತ್ನ ಪ್ರಶಸ್ತಿ

**ಬಳ್ಳಾರಿ :** ಶ್ರೀ ಸುಜ್ಞಾನ ವಿದ್ಯಾಪೀಠ ಮತ್ತು ಸಾಂಸ್ಕೃತಿಕ ರಂಗಕಲಾವಿದರ ಸಾಧಕರ ಶ್ರೀ ಮಾತಾ ಪ್ರಕಾಶನ (ರಿ) ಕರ್ನಾಟಕ ಕಡಲಬಾಳು ಹಗರಿಬೊಮ್ಮನಹಳ್ಳಿ (ತಾ) ವಿಜಯನಗರ ಜಿಲ್ಲೆ ಇವರ ವತಿಯಿಂದ ಕೊಡ ಮಾಡುವ ಕನ್ನಡ ನಾಡು ನುಡಿ, ನೆಲೆ, ಜಲ, ಸಾಂಸ್ಕೃತಿಕ ಸಾಹಿತ್ಯ, ಸಾಮಾಜಿಕ ಸಂಶೋಧನೆ, ಶಿಕ್ಷಣ, ಕೃಷಿ, ಯೋಗ, ಪತ್ರಿಕೋದ್ಯಮ, ವೈದ್ಯಕೀಯ, ನೃತ್ಯ, ಕಲಾ ಮತ್ತು ನಾಟಕ, ಸಿನಿಮಾ ಮುಂತಾದ ಕ್ಷೇತ್ರದಲ್ಲಿ ಸಾಧನೆಗೈದವರನ್ನು



ಗುರುತಿಸಿ ಧಾರವಾಡ ಜಾನಪದ ನುಡಿ ಸಂಭ್ರಮ ಮತ್ತು ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ರಾಜ್ಯ ಮಟ್ಟದ ಉತ್ತಮ ನಾಟಕ ಕಲಾ ಸೇವರತ್ನ ಪ್ರಶಸ್ತಿಯನ್ನು ರಂಗಾಯಣ ಸಾಂಸ್ಕೃತಿಕ ಸಮುಚ್ಚಯ ಸಭಾಭವನ ಧಾರವಾಡದಲ್ಲಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ನಾಟಕ ವಿಭಾಗದ ಉಪನ್ಯಾಸಕರಾದ ಅಸೂಟಿ ಶ್ರೀನಿವಾಸ ರವರಿಗೆ ಸಂಸ್ಥೆಯ ಅಧ್ಯಕ್ಷರಾದ ಡಾ.ನಾಗರಾಜ ಮತ್ತು ಸಮಾರಂಭದಲ್ಲಿ ಭಾಗವಹಿಸಿದ್ದ ಮುಖ್ಯ ಅತಿಥಿಗಳು ನೀಡಿ ಗೌರವಿಸಿ ಸನ್ಮಾನಿಸಿದ್ದಾರೆ.

# ಕೊಟ್ಟಿಗಿನಹಾಳ ಗ್ರಾಮಕ್ಕೆ ಶಾಸಕ ಪತ್ರ ಗುರುದತ್ ಭೇಟಿ



**ಹೊಸ್ಪೇಟ್ :** ಹೊಸಪೇಟೆ ತಾಲೂಕಿನ ಗಾದಿಗನೂರು ಗ್ರಾಮಪಂಚಾಯತಿಯಲ್ಲಿಕ್ಷೇತ್ರದಶಾಸಕರಪುತ್ರರಾದ ಸಮಾಜ ಸೇವಕರಾದ ಹೆಚ್. ಜಿ. ಗುರುದತ್ತ ರವರು ಅದೇ ಪಂಚಾಯತಿ ವ್ಯಾಪ್ತಿಯ ಕೊಟ್ಟಿಗೆನಾಳ್ ಗ್ರಾಮಕೆ ಆಗಮಿಸಿ ಅಲ್ಲಿ ಕುಂದು ಕೊರತೆಗಳನ್ನು ಮುಖಂಡರ ಜೊತೆ ಚರ್ಚಿಸಿ ಹಾಗೆ ಅಲ್ಲಿನ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಆಹಾರ ಸಾಮಗ್ರಿಗಳು ಪರೀಕ್ಷಿಸಿದರು. ಹಾಗೂ ಅಲ್ಲಿನ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿನ ತೊಂದರೆಗಳನ್ನು ಶೀಘ್ರದಲ್ಲೇ ಪರಿಹರಿಸಬೇಕೆಂದು ಅಧಿಕಾರಿಗಳಿಗೆಹೇಳಿದರು. ಈಸಂದರ್ಭದಲ್ಲಿಊರಿನ ಎಲ್ಲಾ ಕಾರ್ಯಕರ್ತರು ಹಿರಿಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸದಸ್ಯರ ಮಧ್ಯೆಯೇ ವಾಗ್ವಾದ, ಕಾವೇರಿದ ಚರ್ಚೆ

**ಕುಷ್ಟಗಿ** : ಸಂತೆ ಮೈದಾನದಲ್ಲಿರುವ ಪುರಸಭೆಗೆ ಸೇರಿದ ವಾಣಿಜ್ಯ ಮಳಿಗೆಗಳನ್ನು ಬಹಿರಂಗ ಹರಾಜು ನಡೆಸುವ ಮೂಲಕ ಹಂಚಿಕೆ ಮಾಡಲು ಶುಕ್ರವಾರ ನಡೆದ ಪುರಸಭೆ ತುರ್ತು ಸಭೆಯಲ್ಲಿ ನಿರ್ಧರಿಸಲಾಯಿತು.

ಸಭೆಆರಂಭಗೊಳ್ಳುತ್ತಿದ್ದಂತೆಅನಧಿಕೃತವಾಗಿ ವ್ಯಾಪಾರಿಗಳಿಗೆ ಮಳಿಗೆಗಳನ್ನು ಹಿಂದಿನ ಅವಧಿಯಲ್ಲಿ ಹಂಚಿಕೆ ಮಾಡಿರುವ ವಿಷಯಕ್ಕೆ ಸಂಬಂಧಿಸಿದಂತೆ ಮಾತು ಆರಂಭಿಸಿ 'ಪ್ರಜಾವಾಣಿ' ವರದಿ ಉಲ್ಲೇಖಿಸಿದ ಸದಸ್ಯ ಖಾಜಾ ಮೈನುದ್ದೀನ್ ಮುಲ್ಲಾ ಇತರರು, 'ಬೇಕಾಬಿಟ್ಟಿಯಾಗಿ ನಿರ್ಣಯ ತೆಗೆದುಕೊಂಡು ಮಳಿಗೆ ಹಂಚಿಕೆ ಮಾಡಿರುವ ವಿಷಯ ಪತ್ರಿಕೆಯಲ್ಲಿ ಸರಣಿಯಲ್ಲಿ ಪ್ರಕಟವಾಗಿ ಪುರಸಭೆ ಮರ್ಯಾದೆ ಹರಾಜಾಗುತ್ತಿದೆ. ಈ ಬಗ್ಗೆ ಸಮಗ್ರ ಚರ್ಚೆಗೆ ಅವಕಾಶ ಕಲ್ಪಿಸಬೇಕು' ಎಂದರು.



ಆದರೆ ಸಭೆಯ ಕಾರ್ಯಸೂಚಿಯಲ್ಲಿ ಮಳಿಗೆ ವಿಷಯ ಇಲ್ಲ, ಹಾಗಾಗಿ ಅದನ್ನು ಬಿಟ್ಟು ಕಾರ್ಯಸೂಚಿಯಲ್ಲಿರದ ವಿಷಯಗಳ ಬಗ್ಗೆ ಚರ್ಚಿಸುವುದಕ್ಕೆ ಕೆಲ ಸದಸ್ಯರು ಆಕ್ಷೇಪಿಸಿದರು. ಮಳಿಗೆಗಳನ್ನು ಬಹಿರಂಗ ಹರಾಜು ಮೂಲಕ ಹಂಚಿಕೆಗೆ ಮೈನುದ್ದೀನ್ ಮುಲ್ಲಾ ಒತ್ತಾಯಿಸಿದರು. ಅದಕ್ಕೆ ಆಕ್ಷೇಪಿಸಿದ ಸದಸ್ಯ ಗಂಗಾಧರ ಹಿರೆಮಠ, ಅಂಬಣ್ಣ ಬಜಂತ್ರಿ ಇತರರು, ಈಗಾಗಲೇ ಮಳಿಗೆಯಲ್ಲಿರುವವರು ಬಾಡಿಗೆ ಕಟ್ಟುತ್ತ ಬಂದಿದ್ದು ?50 ಸಾವಿರ ಠೇವಣಿ ಪಡೆದು ಅವರಿಗೇ ವಹಿಸಿಕೊಡಿ, ಪುನಃ ಟೆಂಡರ್ ಕರೆಯುವುದು ಬೇಡ ಎಂದೇ ಪಟ್ಟು ಹಿಡಿದಿದ್ದರು.

ಈ ಸಂದರ್ಭದಲ್ಲಿ ಸದಸ್ಯರ ಮಧ್ಯೆ ತೀವ್ರ ವಾಗ್ವಾದ ನಡೆಯಿತು. 'ನಿಮ್ಮ ಅವಧಿಯಲ್ಲಿಯೇ ಮಳಿಗೆ ಹಂಚಿಕೆಯಾಗಿದ್ದು ಯಾವ ನಿಯಮ, ಆಧಾರದ ಮೇಲೆ ಮಾಡಿದ್ದೀರಿ' ಎಂದು ಸದಸ್ಯ ಹಿರೇಮಠ ಅವರನ್ನು ಉದ್ದೇಶಿಸಿ ಪ್ರಶ್ನಿಸಿದರು.

ಮಧ್ಯಪ್ರವೇಶಿಸಿದ ಮುಖ್ಯಾಧಿಕಾರಿ ವಿ.ಐ.ಬೀಳಗಿ, 'ನಿಯಮಗಳು ಮತ್ತು ಮೇಲಧಿಕಾರಿಗಳ ಮಾರ್ಗದರ್ಶನದ ಪ್ರಕಾರ ಬಹಿರಂಗ ಹರಾಜು ನಡೆಸಿಯೇ ಮಳಿಗೆ ಹಂಚಿಕೆಯಾಗಬೇಕಿದ್ದು ಈಗಾಗಲೇ ಜಿಲ್ಲಾಡಳಿತಕ್ಕೆ ಪ್ರಸ್ತಾವ ಸಲ್ಲಿಸಲು ನಿರ್ಧರಿಸಲಾಗಿದೆ ಎಂದು ಸ್ಪಷ್ಟಪಡಿಸಿದರು'. ಆದರೂ ಈಗ ಇದ್ದವರಿಗೇ ಮಳಿಗೆ ವಹಿಸುವಂತೆ ಕೆಲ ಸದಸ್ಯರು ಪಟ್ಟು ಹಿಡಿದಿದ್ದಕ್ಕೆ ಇತರೆ ಸದಸ್ಯರು ಅಚ್ಚರಿ ವ್ಯಕ್ತಪಡಿಸಿದರು.

ಒತ್ತುವರಿ ತೆರವು: 3ನೇ ವಾರ್ಡಿನ ಕಾಲುವೆ ಒತ್ತುವರಿತೆರವುಗೊಳಿಸಿನೆನೆಗುದಿಯಲ್ಲಿರುವ ಸಿಸಿ ಚರಂಡಿ ನಿರ್ಮಾಣಕ್ಕೆ ಸದಸ್ಯರು ಒತ್ತಾಯಿಸಿದರು. ಈ ವಿಷಯದಲ್ಲಿರೂ ತೀವ್ರ ವಾಗ್ವಾದ ನಡೆಯಿತು. ನಿಯಮಗಳ ಪ್ರಕಾರ ಕನಿಷ್ಟ 30 ಅಡಿ ಚರಂಡಿಯನ್ನು ನಿರ್ಮಿಸಲು ಕ್ರಮ ಕೈಗೊಳ್ಳಬೇಕಿದೆ ಎಂದು ಸದಸ್ಯ ಮೈನುದ್ದೀನ್ ಮುಲ್ಲಾ ಹೇಳಿದರು. ಒತ್ತುವರಿ ಬಗ್ಗೆ ಸ್ಥಾನಿಕ ಪರಿಶೀಲನೆ ನಡೆಸಿ ವರದಿ ನೀಡಲು ಪುರಸಭೆ ಎಂಜಿನಿಯರ್ ಶಿಲ್ಪಾ ಅವರಿಗೆ ಸೂಚಿಸಲಾಯಿತು.

ಗ್ರಾಮೀಣ ಬ್ಯಾಂಕ್ ಬಳಿಯ ರಸ್ತೆ ಕಾಮಗಾರಿ ನಡೆಯದ ಕಾರಣ ಜನ ತೊಂದರೆ ಅನುಭವಿಸುತ್ತಿರುವುದನ್ನು ಸಭೆಯಲ್ಲಿ ಪ್ರಸ್ತಾಪಿಸಲಾಯಿತು.

ಇನ್ನು ಮುಂದೆ ಮುಲಾಜಿಲ್ಲದೆ ಅಕ್ರಮ ಕಟ್ಟೆ, ಮೆಟ್ಟಿಲು ಇತರೆ ಕಟ್ಟಡಗಳನ್ನು ವಾರದ ಒಳಗಾಗಿ ತೆರವುಗೊಳಿಸುವಂತೆ ಅಧ್ಯಕ್ಷ ಮಹಾಂತೇಶ ಕಲಭಾವಿ ತಾಕೀತು ಮಾಡಿದರು.

ಸ್ಥಳೀಯ ಸಂಸ್ಥೆಗಳ ಕಟ್ಟಡಗಳ ನವೀಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಪುರಸಭೆಗಳಿಗೆ ?7.50 ಕೋಟಿ ಅನುದಾನ ನಿಗದಿಯಾಗಿದೆ, ಶೇ25ರಷ್ಟನ್ನು ಸ್ಥಳೀಯ ಸಂಸ್ಥೆಗಳು ಭರಿಸಬೇಕಿದೆ. ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವ ಸಲ್ಲಿಸಬೇಕಿದೆ ಎಂದು ಎಂಜಿನಿಯರ್ ಶಿಲ್ಪಾ ಹೇಳಿದರು. ಪುರಸಭೆಯ ಹೊಸ ಕಟ್ಟಡ ನಿರ್ಮಾಣಕ್ಕೆ ಸದಸ್ಯರು ಸಹಮತ ವ್ಯಕ್ತಪಡಿಸಿದರೆ ಇನ್ನೂ ಕೆಲವರು ಜಾಗ ಸಿಗದಿದ್ದರೆ ಇದ್ದ ಕಟ್ಟಡವನ್ನೇ ತೆರವುಗೊಳಿಸಿ ಹೊಸದಾಗಿ ನಿರ್ಮಿಸಲು ಸಲಹೆ ನೀಡಿದರು.

ಅಧ್ಯಕ್ಷ ಮಹಾಂತೇಶ ಕಲಭಾವಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉಪಾಧ್ಯಕ್ಷೆ ನಾಹೀನಾ ಮುಲ್ಲಾ, ಮುಖ್ಯಾಧಿಕಾರಿ ವಿ.ಐ.ಬೀಳಗಿ, ಸದಸ್ಯರು, ನಾಮನಿರ್ದೇಶಿತ ಸದಸ್ಯರು ಹಾಜರಿದ್ದರು.

# 'ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆ': ಗಂಗಾಧರಸ್ವಾಮಿ ಕಲ್ಲಬಾಗಿಲಮಠ



**ಕನಕಗಿರಿ** : ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಗೆ ಸೇರಿದ ಆವರಣದಲ್ಲಿ ಶಾಲಾ ಕೊಠಡಿ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ 1.98 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದಾರೆ ಎಂದು ಎಂದು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಗಂಗಾಧರಸ್ವಾಮಿ ಕಲ್ಲಬಾಗಿಲಮಠ ತಿಳಿಸಿದರು.

ಶಾಲಾ ಕೊಠಡಿಯ ಕಾಮಗಾರಿಗೆ ಶುಕ್ರವಾರ ನಡೆದ ಭೂಮಿಪೂಜೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಂಕಾಪುರ ಗ್ರಾಮದಿಂದ ಕನಕಗಿರಿ–ಕೊಪ್ಪಳ ಮುಖ್ಯ ರಸ್ತೆವರೆಗೆ ಡಾಂಬರ್ ರಸ್ತೆ ನಿರ್ಮಾಣಕ್ಕೆ 2.70 ಕೋಟಿ, ಪಟ್ಟಣದ ನೀರಲೂಟಿ ವೃತ್ತದಿಂದ ಮಲ್ಲಿಗೆವಾಡ ಗ್ರಾಮದ ರಸ್ತೆವರೆಗೆ ಡಾಂಬರ್ ರಸ್ತೆ ನಿರ್ಮಾಣಕ್ಕೆ 1.50 ಲಕ್ಷ, ಕೆ.ಮಲ್ಲಾಪುರ – ಕರಡೋಣ ಸರ್ಕಲ್‌ನಿಂದ ಗುಡದೂರು ಗ್ರಾಮದವರೆಗೆ ರಸ್ತೆ ಡಾಂಬರೀಕರಣಕ್ಕೆ 2 ಕೋಟಿ ನೀಡಲಾಗಿದೆ' ಎಂದು ಅವರು ಮಾಹಿತಿ ನೀಡಿದರು.

100 ಬೆಡ್ ಆಸ್ಪತ್ರೆ ನಿರ್ಮಾಣಕ್ಕೆ ಜಾಗ ಗುರುತಿಸಿದ್ದು ಸಚಿವರು 43 ಕೋಟಿ ರೂಪಾಯಿ ಅನುದಾನ ಬಿಡುಗಡೆಗೊಳಿಸಿದ್ದಾರೆ. ಶೀಘ್ರದಲ್ಲಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುವರು' ಎಂದು ತಿಳಿಸಿದರು. ತಾಲ್ಲೂಕಿನ ಸರ್ಕಾರಿ ಶಾಲೆಗಳಲ್ಲಿ ಕೊರತೆ ಇರುವ ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಆದ್ಯತೆ ನೀಡಿದ್ದು 60 ಲಕ್ಷ ಮಂಜೂರಾಗಿದೆ. ಕೆಲ ಕಡೆ ಕಾಮಗಾರಿಗೆ ಚಾಲನೆ ನೀಡಲಾಗಿದೆ' ಎಂದು ಹೇಳಿದರು.

ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಹುಸೇನಬೀ ಚಳ್ಳಮರದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಕಂಠಿರಂಗ ನಾಯಕ, ಪ್ರಭಾರ ಪ್ರಾಂಶುಪಾಲ ಅಮರೇಶ ದೇವರಾಳ, ಮುಖ್ಯಶಿಕ್ಷಕ ತುಳಜಾ ನಾಯಕ್, ಕಾಂಗ್ರೆಸ್ ವಕ್ತಾರ ಶರಣಬಸಪ್ಪ ಭತ್ತದ, ವೀರೇಶ ಸಮಗಂಡಿ, ಪಟ್ಟಣ ಪಂಚಾಯಿತಿ ಸದಸ್ಯರಾದ ಸಿದ್ಧಾರ್ಥ ಕಲ್ಲಬಾಗಿಲಮಠ, ರಾಕೇಶ ಕಂಪ್ಲಿ, ಶರಣೆಗೌಡ ಪೊಲೀಸ್ ಪಾಟೀಲ, ಅನಿಲಕುಮಾರ ಬಿಜ್ಜಳ, ನಾಮನಿರ್ದೇಶಕ ಶಾಂತಪ್ಪ ಬಸರಿಗಿಡದ, ಗಂಗಾಧರ ಚೌಡ್ಕಿ, ಆರೋಗ್ಯ ರಕ್ಷಾ ಸಮಿತಿ ಸದಸ್ಯ ಹನುಮೇಶ ವಾಲೇಕಾರ, ಪ್ರಮುಖರಾದ ಟಿ.ಜೆ. ರಾಮಚಂದ್ರ, ಮದರಸಾಬ ಸಂತ್ರಾಸ್ ಸೇರಿದಂತೆ ಮುಖಂಡರು ಇದ್ದರು.

# ರಸಗೊಬ್ಬರಕ್ಕೆ ಮತ್ತೆ ಬೇಡಿಕೆ: ಪೊಲೀಸ್ ಕಣ್ಗಾವಲಿನಲ್ಲಿ ವಿತರಣೆ

**ಕೊಪ್ಪಳ** : ಮತ್ತೆ ಮಳೆ ಆರಂಭವಾಗಿರುವುದರಿಂದ ಯೂರಿಯಾ ರಸಗೊಬ್ಬರ ಖರೀದಿಸಲು ರೈತರು ಇಲ್ಲಿನ ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘದ ಆವರಣದಲ್ಲಿ ಶುಕ್ರವಾರ ಸಾಕಷ್ಟು ಸಂಖ್ಯೆಯಲ್ಲಿ ನಿಂತಿದ್ದರು. ಇದಕ್ಕೂ ಮೊದಲು ಮುಖ್ಯ ರಸ್ತೆಯಲ್ಲಿ ಪ್ರತಿಭಟನೆ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿ ಸಕಾಲದಲ್ಲಿ ಗೊಬ್ಬರ ಪೂರೈಸಬೇಕು ಎಂದು ಆಗ್ರಹಿಸಿದರು.

ಗಂಜ್ ವೃತ್ತದ ಬಳಿ ದಿಢೀರನೆ ವಾಹನಗಳನ್ನು ತಡಿದು ಪ್ರತಿಭಟನೆ ನಡೆಸಿದ್ದರಿಂದ ಪೊಲೀಸರು ಹಾಗೂ ರೈತರ ನಡುವೆ ಮಾತಿಕ ಚಕಮಕಿ ನಡೆಯಿತು. ಬಳಿಕ ಪೊಲೀಸರು ಸಮಾಧಾನಪಡಿಸಿದರು.



ಜುಲೈ ಎರಡನೇ ವಾರದಲ್ಲಿ ಉತ್ತಮ ಮಳೆಯಾಗಿದ್ದರಿಂದ ಈಗ ಎರಡನೇ ಬಾರಿ ರಸಗೊಬ್ಬರ ಹಾಕಬೇಕಾಗಿದೆ. ಆದ್ದರಿಂದ ಸಂಘ ಆವರಣದಿಂದ ರಸ್ತೆಯ ತನಕ ಜನ ಸರತಿಯಲ್ಲಿ ನಿಂತಿದ್ದರು.

ಪ್ರತಿ ಆಧಾರ್ ಕಾರ್ಡ್‌ಗೆ ಎರಡು ಚೀಲ ರಸಗೊಬ್ಬರಪೂರೈಕೆಮಾಡಲಾಗುತ್ತಿದ್ದರೂ, ಕೆಲವು ಹಮಾಲರು ಹಲವು ಚೀಲಗಳನ್ನು ತೆಗೆದುಕೊಂಡು ಹೋಗುತ್ತಿದ್ದಾರೆ ಎಂದು ರೈತರು ಆರೋಪಿಸಿದರು. ಇದರ ಬಗ್ಗೆ ನಿಗಾ ವಹಿಸುವಂತೆ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಸುರೇಶ ಇಟ್ನಾಳ ಅವರು ಪೊಲೀಸರು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಆಗಿನಿಂದ ಪ್ರತಿಯೊಬ್ಬರಿಗೆ ಪೊಲೀಸ್ ಕಣ್ಗಾವಲಿಯಲ್ಲಿ ರಸಗೊಬ್ಬರ ವಿತರಣೆ ಮಾಡಲಾಯಿತು.

ಬಳಿಕ ಮಾಧ್ಯಮಗಳ ಜೊತೆ ಮಾತನಾಡಿ ಜಿಲ್ಲಾಧಿಕಾರಿ 'ಜಿಲ್ಲೆಗೆ ಇದುವರೆಗೆ ಒಟ್ಟು 40 ಸಾವಿರ ಮೆಟ್ರಿಕ್ ಟನ್‌ನಷ್ಟು ರಸಗೊಬ್ಬರ ಬಂದಿದೆ. ಶುಕ್ರವಾರದ ಬೆಳಿಗ್ಗೆ ವೇಳೆಗೆ ನಮ್ಮ ಬಳಿ 600 ಮೆಟ್ರಿಕ್ ಟನ್ ದಾಸ್ತಾನು ಇತ್ತು. ಮತ್ತೆ 900 ಮೆಟ್ರಿಕ್ ಟನ್‌ನಷ್ಟು ಬಂದಿದೆ. ಮಳೆಯಾದಾಗ ಜಾಸ್ತಿಯಾದಾಗ ಸಹಜವಾಗಿ ಬೇಡಿಕೆ ಇರುತ್ತದೆ. ಜುಲೈನಲ್ಲಿ ಅಗತ್ಯಕ್ಕಿಂತಲೂಹೆಚ್ಚುರಸಗೊಬ್ಬರಬಂದಿದೆ. ಕೆಲವು ರೈತರು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಮಾಡಿಕೊಳ್ಳುತ್ತಿರುವುದು ಗಮನಕ್ಕೆ ಬಂದಿದೆ. ಯಾರೂ ಆ ರೀತಿ ಮಾಡಬಾರದು' ಎಂದು ಹೇಳಿದರು.

ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತು, ನಗರ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಜಯಪ್ರಕಾಶ ಸೇರಿದಂತೆ ಅನೇಕರು ಇದ್ದರು.

# ಸ್ವಾತಂತ್ರ ದಿನಾಚರಣೆಯ ಅಂಗವಾಗಿ ವಿವಿಧ ಸ್ಪರ್ಧೆಗಳು

**ಕೊಪ್ಪಳ** : ಲಯನ್ಸ್ ಕ್ಲಬ್‌ನ ಲಯನ್ಸ್ ಸ್ವಾಮಿ ವಿವೇಕಾನಂದ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸ್ವಾತಂತ್ರ ದಿನಾಚರಣೆಯ ಅಂಗವಾಗಿ ದೇಶಭಕ್ತಿಯನ್ನು ಬೆಳೆಸಲು ಮತ್ತು ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರದರ್ಶಿಸಲು ವಿವಿಧ ಸ್ಪರ್ಧೆಗಳನ್ನು ಏರಿಡಸಲಾಯಿತು.

ದೇಶಭಕ್ತಿ ಗೀತೆ ಹಾಡುವುದು, ಭಾಷಣ, ಚಿತ್ರಕಲೆ ಮತ್ತು ಛದ್ಮವೇಷ (ಫ್ಯಾನ್ಸಿ ಡ್ರೆಸ್) ಸ್ಪರ್ಧೆಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ವಿವಿಧ ತರಗತಿಗಳ ವಿದ್ಯಾರ್ಥಿಗಳು ಶಿಕ್ಷಕರ ಮಾರ್ಗದರ್ಶನದಲ್ಲಿ ಹೆಚ್ಚಿನ ಉತ್ಸಾಹ ಮತ್ತು ಸೃಜನಶೀಲತೆಯಿಂದ ಸಕ್ರಿಯವಾಗಿ ಭಾಗವಹಿಸಿದರು. ವಿದ್ಯಾರ್ಥಿಗಳು ತಮ್ಮಲ್ಲಿ ಅಡಗಿರುವ ಕಲಾತ್ಮಕ ಮತ್ತು ಬೌದ್ಧಿಕ ಕೌಶಲ್ಯಗಳನ್ನು ಪ್ರದರ್ಶಿಸಿದರು. ಕೊನೆಯಲ್ಲಿ



ಪ್ರಾಚಾರ್ಯರಾದ ಶ್ರೀಮತಿ ವೈ. ಪದ್ಮಜಾ ಮಾತನಾಡಿ ವಿವಿಧ ಸ್ಪರ್ದೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ, ಪಾಲಕರಿಗೆ ಶಿಕ್ಷಕರಿಗೆ ಧನ್ಯವಾದಗಳನ್ನು ಅರಸಿ, ಭಾರತದ ಸ್ವಾತಂತ್ರ್ಯ ಹೋರಾಟ ಮತ್ತು ರಾಷ್ಟ್ರೀಯ ಮೌಲ್ಯಗಳ ಬಗ್ಗೆ ಮಾತನಾಡಿದರು.

ಶಾಲೆಯಲ್ಲಿಸ್ವಾತಂತ್ರದಿನಾಚರಣೆಯಕಾರ್ಯಕ್ರಮದಲ್ಲಿ ವಿಜೇತರನ್ನು ಗೌರವಿಸಲಾಗುವುದು.

# 18 ಪ್ರಾಥಮಿಕದಿಂದ ಪ್ರೌಢಶಾಲೆಗಳಾಗಿ ಉನ್ನತೀಕರಣ: ಸಚಿವ ಎಂ.ಬಿ.ಪಾಟೀಲ

**ವಿಜಯಪುರ** : ಸಿ.ಎಸ್.ಆರ್ ಮತ್ತು ದಾನಿಗಳ ಅನುದಾನ, ಸರ್ಕಾರಿ ಅನುದಾನದಡಿ ಹಾಗೂ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 18 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಪ್ರಸಕ್ತ 2025–26 ಶೈಕ್ಷಣಿಕ ವರ್ಷದಿಂದ ಉನ್ನತಿಕರಿಸಿ ಮಂಜೂರಾತಿ ನೀಡಿ ಆದೇಶ ಹೊರಡಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ತಿಳಿಸಿದ್ದಾರೆ.



ಸ್ಥಳೀಯ ಶಾಸಕರು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಅಗತ್ಯಕ್ಕೆಸ್ಪಂದಿಸಿ ಸರ್ಕಾರಿ ಈ ಶಾಲೆಗಳ ಉನ್ನತಿಕರಣಕ್ಕೆ ಕ್ರಮ ಕೈಗೊಂಡಿದೆ. ಇದರಲ್ಲಿ ಬಬಲೇಶ್ವರ ಮತಕ್ಷೇತ್ರದ ಆರು, ಸಿಂದಗಿ ತಾಲ್ಲೂಕಿನ ಎಂಟು, ಮುದ್ದೇಬಿಹಾಳ ತಾಲ್ಲೂಕಿನ ಎರಡು, ಬಸವನಬಾಗೇವಾಡಿ ಮತ್ತು ಇಂಡಿ ತಾಲ್ಲೂಕಿನ ತಲಾ ಒಂದು ಶಾಲೆಗಳನ್ನು ಪ್ರೌಢಶಾಲೆಗೆ ಉನ್ನತಿಕರಿಸಿ ಆದೇಶ ಹೊರಡಿಸಿದೆ ಎಂದು ಅವರು ತಿಳಿಸಿದ್ದಾರೆ.

ಕೈಗಾರಿಕಾ ಇಲಾಖೆಯ ಸಿ.ಎಸ್.ಆರ್ ಅನುದಾನದಡಿ ಬಬಲೇಶ್ವರ ಮತ್ತು ತಿಕೋಟಾ ತಾಲ್ಲೂಕಿನ ಹೊನವಾಡದಲ್ಲಿರುವ ಸರ್ಕಾರಿ ಎಂ.ಪಿ.ಎಸ್, ಕಾತ್ರಾಳದ ಹಿರಿಯ ಪ್ರಾಥಮಿಕ ಶಾಲೆ, ರಾಜ್ಯ ಸರ್ಕಾರಿ ಅನುದಾನದಡಿ ಸಿದ್ದಾಪೂರ(ಅ) ಸರ್ಕಾರಿ ಜಿ.ಎಚ್.ಪಿ.ಎಸ್ ಶಾಲೆ, ನಿಡೋಣಿಯ ಸರ್ಕಾರಿ ಎಚ್.ಪಿ.ಎಸ್, ತಿಗಣಿಬಿದರಿಯ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಕೋಟ್ಯಾಳದ ಎಚ್.ಪಿ.ಎಸ್ ಶಾಲೆ ಪ್ರೌಢಶಾಲೆಗಳಾಗಿ ಉನ್ನತಿಕರಣವಾಗಲಿವೆ ಎಂದು ಹೇಳಿದರು.

ರಾಜ್ಯ ಸರ್ಕಾರದ ಅನುದಾನದಡಿ ಸಿಂದಗಿ ತಾಲ್ಲೂಕಿನ ಸಿಂದಗಿ ಪಟ್ಟಣದ ಸರ್ಕಾರಿ ಕೆ.ಜಿ.ಎಚ್.ಪಿ.ಎಸ್ ಶಾಲೆ, ಬೊಮ್ಮನಜೋಗಿ ಎಲ್.ಟಿ–1 ಸರ್ಕಾರಿ ಜಿ.ಎಚ್.ಪಿ.ಎಸ್ ಶಾಲೆ, ಕೋರವಾರದ ಕೆ.ಬಿ.ಎಚ್.ಪಿ.ಎಸ್ ಶಾಲೆ, ನಾಗರಹಳ್ಳಿಯ ಸರ್ಕಾರಿ ಕೆ.ಬಿ.ಎಚ್.ಪಿ.ಎಸ್ ಶಾಲೆ, ಚಿಕ್ಕಸಿಂದಗಿಯ ಸರ್ಕಾರಿ ಕೆ.ಬಿ.ಎಚ್.ಪಿ.ಎಸ್ ಶಾಲೆ, ಆಹೇರಿಯ ಸರ್ಕಾರಿ ಎಂ.ಪಿ.ಎಸ್ ಶಾಲೆ ಹಾಗೂ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಗುಂದಗಿಯ ಸರ್ಕಾರಿ ಕೆ.ಬಿ.ಎಚ್.ಪಿ.ಎಸ್ ಶಾಲೆ ಮತ್ತು ಮಾದನಹಳ್ಳಿಯ ಸರ್ಕಾರಿ ಕೆ.ಬಿ.ಎಚ್.ಪಿ.ಎಸ್ ಶಾಲೆಗಳು ಪ್ರೌಢಶಾಲೆಗಳಾಗಿ ಉನ್ನತಿಕರಣವಾಗಲಿವೆ ತಿಳಿಸಿದ್ದಾರೆ.

ರಾಜ್ಯ ಸರ್ಕಾರಿದ ಅನುದಾನದಡಿ ಮುದ್ದೇಬಿಹಾಳ ತಾಲ್ಲೂಕಿನ ಶಿವಪೂರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಗಡಿಸೋಮನಾಳ ಗ್ರಾಮದ ಸರ್ಕಾರಿ ಎಚ್.ಪಿ.ಎಸ್ ಶಾಲೆಗಳು ಪ್ರೌಢಶಾಲೆಗಳಾಗಿ ಉನ್ನತಿಕರಣವಾಗಲಿವೆ ಎಂದರು.

ಬಸವನ ಬಾಗೇವಾಡಿ ತಾಲ್ಲೂಕಿನ ಉಕ್ಕಲಿಯ ಸರ್ಕಾರಿ ಯು.ಬಿ.ಎಚ್.ಪಿ.ಎಸ್ ಶಾಲೆಯನ್ನು ರಾಜ್ಯ ಸರ್ಕಾರದ ಅನುದಾನದಡಿ ಮತ್ತು ಇಂಡಿ ತಾಲ್ಲೂಕಿನ ತೆಗ್ಗಿಹಳ್ಳಿಯ ಸರ್ಕಾರಿ ಎಚ್.ಪಿ.ಎಸ್ ಶಾಲೆಯನ್ನು ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಉನ್ನತಿಕರಿಸಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

# ರೈತರ ಜಮೀನುಗಳಿಗೆ ನುಗ್ಗಿದ ಡೋಣಿ ನದಿ ಪ್ರವಾಹ!

**ತಾಳಿಕೋಟೆ** : ತಾಲೂಕಿಗೆ ಸಂಬಂದಿಸಿದ ಬೊಮ್ಮನಹಳ್ಳಿ, ಗುತ್ತಿಹಾಳ, ಬೋಳವಾಡ, ತಾಳಿಕೋಟೆ, ಹರನಾಳ, ಮಿಣಜಗಿ ಗ್ರಾಮಗಳ ಸಿಮೇಗೆ ಸಂಬಂದಿತ ರೈತರ ಜಮೀನುಗಳಿಗೆ ಡೋಣಿ ನಧಿ ಪ್ರವಾಹದ ನೀರು ನುಗ್ಗಿದ್ದು ಬಿತ್ತನೆ ಮಾಡಲಾದ ಬೀಜಗೊಬ್ಬರ ಅಲ್ಲದೇ ಬೆಳೆಯೂ ಕೂಡಾ ಕೊಚ್ಚಿಕೊಂಡು ಹೋಗಿದ್ದು ಸಾಲಸೂಲ ಮಾಡಿ ಬಿತ್ತನೆ ಮಾಡಲಾದ ಬೆಳೆಯು ಡೋಣಿ

ನಧಿಯ ಪ್ರವಾಹಕ್ಕೆ ಕೊಚ್ಚಿಹೋಗಿರುವದು ನಧಿ ತೀರದ ರೈತರಿಗೆ ಸಂಕಷ್ಟ ತಂದೊಡ್ಡಿದೆ. ಈಗಾಗಲೇ ಉತ್ತಮ ಮಳೆಯಾಗಿದೆ ಬಿತ್ತನೆ ಮಾಡಿದ ಹತ್ತಿ, ತೊಗರಿ, ಸೂರ್ಯಕಾಂತಿ, ಅಲ್ಲದೇ ಕಬ್ಬು ಇನ್ನಿತರ ಬೆಳೆಗಳನ್ನು ಬಿತ್ತನೆ ಮಾಡಿಕೊಂಡು ಉತ್ತಮ ಫಸಲು ಪಡೆಯುವ ನಿರಿಕ್ಷೆಯಲ್ಲಿದ್ದ ರೈತರಿಗೆ ಡೋಣಿ ನಧಿಯ ಪ್ರವಾಹವು ದಿಕ್ಕು ತೋಚದಂತೆ ಮಾಡಿದೆ.



ಡೋಣಿ ನಧಿ ತೀರಕ್ಕೆ ಹೊಂದಿಕೊಂಡು ಇರುವ ಗುತ್ತಿಹಾಳ ಗ್ರಾಮದ, ಬೋಳವಾಡ ಗ್ರಾಮದ, ಬೊಮ್ಮನಹಳ್ಳಿ, ತಾಳಿಕೋಟೆ, ಹರನಾಳ, ಗ್ರಾಮದ ನೂರಾರು ರೈತರು ನೂರಾರು ಏಕರೆ ಜಮೀನುಗಳಲ್ಲಿ ಶೇ. 90 ರಷ್ಟು ಬಿತ್ತನೆ ಮಾಡಿಕೊಂಡಿದ್ದಾರೆ ಡೋಣಿ ನಧಿಯ ಪ್ರವಾಹ ರೈತರಿಗೆ ಸಂಕಷ್ಟ ತಂದೊಡ್ಡಿದ್ದು ಈ ನಧಿಯ ಪ್ರವಾಹ ನುಗ್ಗಲು ಡೋಣಿ ನಧಿಯಲ್ಲಿ ತುಂಬಿಕೊಂಡಿರುವ ಹೂಳು ಕಾರಣವಾಗಿದೆ ಈ ಹೂಳಿಂದ ನಧಿಯ ನೀರೆಲ್ಲವೂ ಅಕ್ಕ ಪಕ್ಕದ ಜಮೀನುಗಳಿಗೆ ನುಗ್ಗುತ್ತಾ ಪ್ರತಿವರ್ಷ ಹಾನಿ ಮಾಡುತ್ತಾ ಸಾಗಿದೆ ಜನ ಪ್ರತಿನಿಧಿಗಳು, ಅಧಿಕಾರಿಗಳು ಜಾಣ ಕುರುಡುತನ ಪ್ರದರ್ಶಿಸುವ ಕಾರ್ಯ ಮುಂದುವರೆದಿದೆ. ಈ ನಧಿಯಲ್ಲಿ ತುಂಬಿರುವ ಹೂಳೆತ್ತಲು ಯಾವುದೇ ಕ್ರಮ ಜರುಗಿಸಿಲ್ಲಾ.

ಕೆಳಮಟ್ಟದ ಸೇತುವೆಗಳು ಜಲಾವೃತ

ಜಿಲ್ಲೆಯ ವಿವಿಧ ಭಾಗಗಳಲ್ಲಿ ಸುರಿದ ಭಾರಿ ರಬಸದ ಮಳೆಗೆ ಡೋಣಿ ನಧಿಯು ಕಳೆದ 4 ದಿನಗಳಿಂದಲೂ ಉಕ್ಕಿ ಹರಿಯುತ್ತಿದ್ದು ವಿಜಯಪೂರ ರಸ್ತೆಯ ಕೆಳಮಟ್ಟದ ಸೇತುವೆ ಹಾಗೂ ಹಡಗಿನಾಳ ಮಾರ್ಗದ ಮೂಕೀಹಾಳ ಹಳ್ಳದ ಕೆಳಮಟ್ಟದ ಸೇತುವೆ ಸಂಪೂರ್ಣ ಜಲಾವೃತಗೊಂಡಿದ್ದು ಇದರಿಂದ ತಾಳಿಕೋಟೆಯಿಂದ ದೂರದ ಊರು, ನಗರ ಪಟ್ಟಣಗಳಲ್ಲದೇ ವಿವಿಧ ಗ್ರಾಮಗಳಿಗೆ ತೆರಳುವ ಪ್ರಯಾಣಿಕರ ಗೋಳು ಹೇಳತೀರದಂತಾಗಿದೆ.

ತಾಳಿಕೋಟೆಯಿಂದ ರಾಜ್ಯ ಹೆದ್ದಾರಿಯ ಮೂಲಕ ವಿಜಯಪೂರಕ್ಕೆ ತೆರಳುವ ಡೋಣಿ ನಧಿಗೆ ಅಡ್ಡಲಾಗಿ ಕಟ್ಟಲಾಗಿರುವ ಮೇಲ್ಮಟ್ಟದ ಸೇತುವೆಯಲ್ಲಿ 4 ವರ್ಷಗಳ ಹಿಂದೆಯೇ ಕುಸಿತ ಕಂಡಿದ್ದರಿಂದ ನೂತನ ಸೇತುವೆ ನಿರ್ಮಾಣಕ್ಕೆ 30 ಕೋಟಿ ರೂ. ಟೆಂಡರ್ ಪ್ರಕ್ರೀಯೇಯು ಆಗಿದ್ದು ಇದರಿಂದ ಮೇಲ್ಮಟ್ಟದ ಸೇತುವೆಯನ್ನು ಕಳೆದ 4 ತಿಂಗಳ ಹಿಂದೆ ನೆಲಸಮ ಗೊಳಿಸಲಾಗಿದೆ ಸದರಿ ಸಂಚಾರ ಮಾರ್ಗವನ್ನು ಪಕ್ಕದಲ್ಲಿಯ ಕೆಳಮಟ್ಟದ ಸೇತುವೆಯ ಮೇಲೆ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿತ್ತು. ಆದರೆ ಜಿಲ್ಲೆಯ ವಿವಿಧ ಭಾಗಗಳಲ್ಲಿ 4ದಿನಗಳಿಂದ ಸುರಿಯುತ್ತಿರುವ ಮಳೆಗೆ ಡೋಣಿ ನಧಿಯಲ್ಲಿ ಭಾರಿ ಪ್ರಮಾಣದ ನೀರು ಹರಿದು ಬರುತ್ತಿರುವದರಿಂದ ಕೆಳಮಟ್ಟದ ಸೇತುವೆಗಳು ಸಂಪೂರ್ಣ ಜಲಾವೃತಗೊಂಡಿದೆ.

# ಅಡುಗೆ ಸಹಾಯಕರ ಅಮಾನತಿಗೆ ಎಬಿವಿಪಿ ಆಗ್ರಹ

**ವಿಜಯಪುರ** : ವಿದ್ಯಾರ್ಥಿನಿಯರನ್ನು ಕರೆದುಕೊಂಡು ಹೋಗಿ ಜನ್ಮದಿನ ಆಚರಿಸಿರುವ ವಿಜಯಪುರದ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಸತಿ ನಿಲಯದ ಹಾಸ್ಟೇಲ್ ಅಡುಗೆ ಸಹಾಯಕರಾದ ರಿಜ್ವಾನ್ ಮುಲ್ಲಾ ಅವರನ್ನು ಅಮಾನತು ಮಾಡುವಂತೆ ಆಗ್ರಹಿಸಿ ಎ.ಬಿ.ವಿ.ಪಿ. ಕಾರ್ಯಕರ್ತರು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತೆದಾರ ಅವರಿಗೆ ಮನವಿ ಸಲ್ಲಿಸಿದರು.



ಎಬಿವಿಪಿ ವಿಭಾಗ ಸಂಘಟನಾ ಕಾರ್ಯದರ್ಶಿಹರ್ಷನಾಯಕಮಾತನಾಡಿ, ಹಾಸ್ಟೆಲ್ ವಿದ್ಯಾರ್ಥಿನಿಯರನ್ನು ಜನ್ಮದಿನ ಆಚರಣೆ ಕಾರ್ಯಕ್ರಮಕ್ಕೆ ಕರೆದುಕೊಂಡು ಹೋಗಿರುವುದನ್ನು ಪರಿಷತ್ ತೀವ್ರವಾಗಿ ಖಂಡಿಸುತ್ತದೆ ಎಂದರು.

ಜಿಲ್ಲಾ ಸಂಚಾಲಕ ಸಂದೀಪ ಅರಳಗುಂಡಿ ಮಾತನಾಡಿ, ಬಡ ಪ್ರತಿಭಾವಂತ ವಿದ್ಯಾರ್ಥಿನಿಯರು ಶಿಕ್ಷಣವನ್ನು ಪಡೆದುಕೊಂಡು ತಮ್ಮ ಜೀವನದಲ್ಲಿ ಏನಾದರೂ ಸಾಧಿಸಬೇಕೆಂಬುವ ಹಂಬಲದೊಂದಿಗೆ ವಸತಿ ನಿಲಯಗಳಲ್ಲಿ ಇದ್ದು ವಿದ್ಯಾಭ್ಯಾಸ ಮಾಡುತ್ತಿರುತ್ತಾರೆ. ಇಂತಹ ಸಂದರ್ಭದಲ್ಲಿ ವಸತಿ ನಿಲಯಗಳನ್ನು ನೋಡಿಕೊಳ್ಳುವ ವಾರ್ಡನ್ ಮತ್ತು ಅಡುಗೆ ಸಿಬ್ಬಂದಿಯವರು ಈ ರೀತಿಯ ವರ್ತನೆ ಸರಿಯಾದದ್ದಲ್ಲ ಎಂದರು.

ಎಬಿವಿಪಿ ನಗರ ಸಂಘಟನಾ ಕಾರ್ಯದರ್ಶಿ ಶಶಿಕಾಂತ ರಾಕಲೆ,

ರಾಜ್ಯ ಕಾರ್ಯಕಾರಿಣಿ ಸದಸ್ಯೆ ಐಶ್ವರ್ಯ ಆಸಂಗಿ, ಸ್ನೇಹ ಹಿರೇಮಠ, ಪ್ರವೀಣ ಬಿರಾದಾರ, ಚೇತನ ಕೊರವಾರ, ದಾನಮ್ಮ ಹೊಸಮನಿ, ಸುನಿಲ ರಾಠೋಡ, ಬಾಲಾಜಿ ಬಿರಾದಾರ, ವಿದ್ಯಾರ್ಥಿಗಳಾದ ಗಣೇಶ್, ಪ್ರಜ್ವಲ್, ಮನೋಜ್, ಲಕ್ಷ್ಮಿ, ಸಾಕ್ಷಿ, ಪ್ರತೀಕ್ಷಾ ಇದ್ದರು.

# ಬ್ರಹ್ಮಕುಮಾರಿ ಈಶ್ವರಿಯ ವತಿಯಿಂದ ರಕ್ಷಾಬಂಧನ



**ವಿಜಯಪುರ** : ರಕ್ಷಾ ಬಂಧನದ ಅಂಗವಾಗಿ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದವರು ಸಚಿವ ಎಂ. ಬಿ. ಪಾಟೀಲ ಅವರಿಗೆ ರಾಖಿ ಕಟ್ಟಿ ಹಬ್ಬದ ಶುಭಾಷಯ ಕೋರಿದರು. ಇಂದು ಶನಿವಾರ ಬೆಳಿಗ್ಗೆ ಸಚಿವರ ಗೃಹ ಕಚೇರಿಗೆ ಆಗಮಿಸಿದ ನಗರದ ಬ್ರಹ್ಮಕುಮಾರಿ ಈಶ್ವರಿಯ ವಿವಿ ಪ್ರಕೃತಿ ಕಾಲನಿ ಸೇವಾ ಕೇಂದ್ರಸಂಚಾಲಕಿ ಶೋಭಾ ಅವರು ಸಚಿವರಿಗೆ ರಾಖಿ ಕಟ್ಟಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು ಪ್ರೇಮ, ವಿಶ್ವಾಸ ಮತ್ತು ರಕ್ಷಣೆಯ ಬಾಂಧವ್ಯವನ್ನು ಪ್ರತಿಬಿಂಬಿಸುವ ಪವಿತ್ರ ಹಬ್ಬ. ಸಹೋದರ–ಸಹೋದರಿಯರ ನಡುವಿನ ಆತ್ಮೀಯ ಸಂಬಂಧವನ್ನು ಇನ್ನಷ್ಟು ಗಟ್ಟಿಗೊಳಿಸಲಿ. ಪರಸ್ಪರ ನಂಬಿಕೆ ಮತ್ತು ಪ್ರೀತಿಯನ್ನು ವೃದ್ಧಿಸಲಿ. ಎಲ್ಲರ ಜೀವನದಲ್ಲಿ ಬಾಂಧವ್ಯದ ನಂಟು ಇನ್ನಷ್ಟು ಗಟ್ಟಿಯಾಗಲಿ. ಸಂಬಂಧಗಳ ಮೌಲ್ಯ ಹೆಚ್ಚಲಿ, ಪ್ರೀತಿ ಮತ್ತು ಗೌರವ ಚಿಗುರಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಸೇವಾ ಕೇಂದ್ರದ ಗೀರೀಶ ಮತ್ತಿತರರು ಉಪಸ್ಥಿತರಿದ್ದರು. ಧನ್ಯವಾದಗಳು.

# ಭೂ ಪರಿವರ್ತನೆ ಆದೇಶ ಹಿಂಪಡೆಯಲು ಆಗ್ರಹ

**ವಿಜಯಪುರ** : ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮದ ಡೋಣಿ ನದಿ ಪ್ರವಾಹ ಪೀಡಿತ ಪ್ರದೇಶದಲ್ಲಿ ಜಿಲ್ಲಾಡಳಿತ ವಸತಿ ಉದ್ದೇಶಕ್ಕೆ ನೀಡಿರುವ ಭೂ ಪರಿವರ್ತನೆ ಆದೇಶವನ್ನು ಹಿಂಪಡೆಯಬೇಕೆಂದು ಆಗ್ರಹಿಸಿ ಅಖಿಲ ಭಾರತೀಯ ವಾಲ್ಮೀಕಿ ಸಮಾಜ ಸೇವಾ ಸಂಘದಿಂದ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಹಾಗೂ ಜಿಲ್ಲಾಧಿಕಾರಿಗಳಿಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಅಖಿಲ ಭಾರತೀಯ ವಾಲ್ಮೀಕಿ ಸಮಾಜ ಸೇವಾ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಟಗಿ ಮಾತನಾಡಿ, ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಸಾರವಾಡ ಗ್ರಾಮದ ಪ್ರವಾಹ ಪೀಡಿತ ರಿ.ಸ.ನಂ.613*/1 ರ ಜಮೀನಿಗೆ ಭೂ ಪರಿವರ್ತನೆಗೆ ವಿಜಯಪುರ ಜಿಲ್ಲಾಡಳಿತ ಅನುಮತಿ ನೀಡಿದ್ದು ಕಾನೂನು ಬಾಹೀರವಾಗಿದೆ ಕೂಡಲೇ ನೀಡಿರುವ ಅನುಮತಿಯನ್ನು ಹಿಂಪಡೆದು ಮುಂದೆ ಆಗುವ ಜನ, ಜಾನುವಾರ ಹಾಗೂ ಸಾರ್ವಜನಿಕ ಆಸ್ತಿ, ಪಾಸ್ತಿಗಳಿಗೆ ಹಾನಿಯಾಗುವುದನ್ನು ತಡೆಗಟ್ಟಬೇಕೆಂದು ಒತ್ತಾಯಿಸಿದರು.

ಈ ಕುರಿತು ಈಗಾಗಲೇ ಜಿಲ್ಲಾಡಳಿತ ಸಂಬಂಧಿಸಿದ ಬಬಲೇಶ್ವರ ತಾಲೂಕಾ ಆಡಳಿತ ಸಂಬಂಧಿಸಿದ ಸಾರವಾಡ ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿಕೊಂಡಿದ್ದರೂ ಕೂಡಾ ನಿರಂತರವಾಗಿ ಭೂ ಪರಿವರ್ತನೆಗೆ ಯತ್ನಿಸುತ್ತಿರುವುದರ ಹಿಂದೆ ಕಾಣದ ಸಮಾಜ ಘಾತುಕ ರಾಜಕೀಯ ಶಕ್ತಿಗಳು ಕೆಲಸ ಮಾಡುತ್ತಿವೆ.

ಇದರ ಹಿಂದೆ ಜನರ ಜೀವ ಆಸ್ತಿ ಪಾಸ್ತಿ ಹಾನಿಮಾಡುವ ದುರುದ್ದೇಶವಿದೆ ಎಂದು ಗಂಭೀರ ಆರೋಪ ಮಾಡಿದ ಅವರು, ಜಿಲ್ಲಾಡಳಿತ ಭೂ ಪರಿವರ್ತನೆ ಆದೇಶವನ್ನು ರದ್ದುಪಡಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಸಾರವಾಡ ಗ್ರಾಮದ ಜನರ ಹಿತ ಕಾಪಾಡಲು ಕಾನೂನು ಹೋರಾಟದ ಮೂಲಕ ತಕ್ಕ ಉತ್ತರ ನೀಡಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಯೋಜನೆಗಳ ಜಾರಿಗೆ ಅನುದಾನ ನೀಡದ ಸರ್ಕಾರ: ಕಾರಜೋಳ ಟೀಕೆ



**ವಿಜಯಪುರ :** ಸಾಮಾಜಿಕ ಯೋಜನೆಗಳ ಜಾರಿಗೆ ಕಾಂಗ್ರೆಸ್ ಸರ್ಕಾರ ಸಂಪೂರ್ಣ ಉದಾಸೀನ ತೋರುತ್ತಿದೆ. ಸಾಮಾಜಿಕ ಯೋಜನೆಗಳನ್ನು ಅನುಷ್ಠಾನಗೊಳಿಸುವ ಅನೇಕ ನಿಗಮಗಳಲ್ಲಿ ಭ್ರಷ್ಟಾಚಾರ ದೊಡ್ಡ ಮಟ್ಟದಲ್ಲಿ ನಡೆದಿದೆ. ಗಂಗಾ ಕಲ್ಯಾಣ, ಸ್ವಯಂ ಉದ್ಯೋಗಕ್ಕಾಗಿ ನೇರ ಸಾಲ ಯೋಜನೆ ಸೇರಿದಂತೆ ಯಾವ ಯೋಜನೆಗಳಿಗೂ ಸಮರ್ಪಕವಾಗಿ ಅನುದಾನವನ್ನೇಸರ್ಕಾರಬಿಡುಗಡೆಮಾಡಿಲ್ಲ.ಸರ್ಕಾರ ಕೂಡಲೇ ಈ ಯೋಜನೆಗಳಿಗೆ ಸಂಬಂಧಿಸಿದಂತೆ ಶ್ವೇತಪತ್ರ ಹೊರಡಿಸಬೇಕು ಎಂದು ಬಿಜೆಪಿ ರಾಜ್ಯ ಎಸ್.ಸಿ.ಮೋರ್ಚಾ ಪ್ರಧಾನಕಾರ್ಯದರ್ಶಿ ಉಮೇಶ ಕಾರಜೋಳ ಸರ್ಕಾರಕ್ಕೆ ಸವಾಲು ಹಾಕಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ಮೂಲಕ ಸರ್ಕಾರಕ್ಕೆ ಸವಾಲು ಹಾಕಿರುವ ಅವರು, ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯ ಹಣವನ್ನು ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಮೀಸಲಿರಿಸುವ ಮೂಲಕ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನರಿಗೆ ರಾಜ್ಯ ಸರ್ಕಾರ ದ್ರೋಹ ಬಗೆಯುತ್ತಿದೆ, ಸರಿಸುಮಾರು 36,000 ಕೋಟಿ ರೂ. ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ದುರಪಯೋಗಮಾಡಿ ದಲಿತರಿಗೆ ಅನ್ಯಾಯ ಮಾಡುತ್ತಿದೆ.

ಒಂದೆಡೆ ಅಹಿಂದ ವರ್ಗದ ಬಗ್ಗೆ ಸುಳ್ಳು ಕಾಳಜಿ ತೋರುವ ಸಿದ್ಧರಾಮಯ್ಯ ಅಹಿಂದ ವರ್ಗದ ಆಶೀರ್ವಾದಿಂದ ಅಧಿಕಾರಕ್ಕೆ ಬಂದು, ಈಗ ದಲಿತರ ತಟ್ಟೆಯಲ್ಲಿರುವ ಊಟವನ್ನು ಕಸಿಯುತ್ತಿದ್ದಾರೆ ಎಂದು ಕಾರಜೋಳ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕುರಿತು ಅನೇಕ ಸವಾಲುಗಳನ್ನು ಕೇಳಿರುವ ಅವರು, ಯಾವ ಯಾವ ಯೋಜನೆಯ ಅಡಿ ಎಷ್ಟು ಅನುದಾನವನ್ನು ದಲಿತರ ಶ್ರೇಯೋಭಿವೃದ್ಧಿಗೆ ಬಳಸಿದ್ದೀರಿ.

ಈ ಹಿಂದೆ ನಮ್ಮ ಸರ್ಕಾರ ಅವಧಿಯಲ್ಲಿ 4 ಸಾವಿರ ಎಕರೆಯಷ್ಟು ಭೂ ಒಡೆತನ ಯೋಜನೆಯಡಿ ದಲಿತರಿಗೆ ಮಂಜೂರು ಮಾಡಿದ್ದೇವೆ.

ನಿಮ್ಮಸರಕಾರ ಅಧಿಕಾರಕ್ಕೆ ಬಂದ ನಂತರ ಭೂ ಒಡೆತನ ಯೋಜನೆಯಡಿ ಗಂಗಾ ಕಲ್ಯಾಣ ಯೋಜನೆಅಡಿ ಉದ್ಯಮ ಶಿಲತಾ ಅಭಿವೃದ್ಧಿ ಯೋಜನೆಯಡಿ, ಸ್ವಯಂಉದ್ಯೋಗ ನೇರ ಸಾಲ ಯೋಜನೆಗಳು ಮೈಕ್ರೊಕ್ರೆಡಿಟ (ಪ್ರೇರಣಾ ಯೋಜನೆ) ಯಾವ ದಲಿತರಿಗೆಲ್ಲಾ ಈ ಯೋಜನೆಗಳಲ್ಲಿ ಅನುದಾನ ನೀಡಿದ್ದೀರಿ ಎಂಬುದರ ಬಗ್ಗೆ ಬಹಿರಂಗ ಮಾಹಿತಿ ನೀಡಿ ಎಂದು ಸವಾಲು ಹಾಕಿದ್ದಾರೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರುಗಳಿಗೆ (ಕಾಂಗ್ರೆಸ್ ಕಾರ್ಯಕರ್ತರಿಗೆ) ಗೌರವ ಧನವನ್ನು ಯಾವ ಯೋಜನೆಯ ಹಣ ಎಂದು ಸಹ ಬಹಿರಂಗಗೊಳಿಸುವಂತೆ ಒತ್ತಾಯಿಸಿದ್ದಾರೆ.

# ಬಂಜಾರ ಅಭಿವೃದ್ಧಿ ನಿಗಮ ಕಚೇರಿಗೆ ಮುತ್ತಿಗೆ ಯತ್ನ: 40ಕ್ಕೂ ಹೆಚ್ಚು ಬಿಜೆಪಿ ಕಾರ್ಯಕರ್ತರ ಬಂಧನ, ಬಿಡುಗಡೆ



**ವಿಜಯಪುರ :** ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಿರಿಸಿದ ಎಸ್‌ಸಿಪಿ–ಟಿಎಸ್‌ಪಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿರುವ ರಾಜ್ಯ ಸರ್ಕಾರದ ದಲಿತ ವಿರೋಧಿ ನೀತಿ ಖಂಡಿಸಿ ಭಾರತೀಯ ಜನತಾ ಪಕ್ಷ ರಾಜ್ಯದಾದ್ಯಂತ ಪ್ರತಿಭಟನೆಗೆ ಅಣಿಯಾದ ಹಿನ್ನೆಲೆಯಲ್ಲಿ ಹೋರಾಟದ ಭಾಗವಾಗಿ ಬಿಜೆಪಿ ಕಾರ್ಯಕರ್ತರು ಬಂಜಾರಾ ಅಭಿವೃದ್ಧಿ ನಿಗಮದ ಕಚೇರಿಗೆ ಮುತ್ತಿಗೆ ಹಾಕಲು ಪ್ರಯತ್ನಿಸಿದರು. ಈ ವೇಳೆ ಪ್ರತಿಭಟನಾಕಾರರನ್ನು ಪೊಲೀಸರು ತಡೆಯಲು ಮುಂದಾದರು. ಈ ವೇಳೆ ಕೆಲ ಕಾಲ ಪ್ರತಿಭಟನಾಕಾರರು ಹಾಗೂ ಪೊಲೀಸರ ನಡುವೆ ವಾಗ್ವಾದ ನಡೆಯಿತು.

ಬಿಜೆಪಿ ಕಾರ್ಯಕರ್ತರು ನಿಗಮದ ಕಚೇರಿಗೆ ಘೋಷಣೆ ಕೂಗುತ್ತಾ ಮುತ್ತಿಗೆ ಹಾಕುವ 40 ಕ್ಕೂ ಹೆಚ್ಚು ಕಾರ್ಯಕರ್ತರನ್ನು ಬಂಧಿಸಿ ನಂತರ ಬಿಡುಗಡೆಗೊಳಿಸಿದರು.

ದಲಿತ ವಿರೋಧಿ ನೀತಿ ಅನುಸರಿಸುತ್ತಿರುವ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಮಾತನಾಡಿ, ರಾಜ್ಯದಲ್ಲಿರುವ ಆಡಳಿತಾರೂಢ ಕಾಂಗ್ರೆಸ್ ಎಸ್‌ಸಿಪಿ–ಟಿಎಸ್‌ಪಿ ಅನುದಾನಕ್ಕೂ ಕೈ ಹಾಕಿ ದಲಿತ ವರ್ಗದ ಜನರಿಗೆ ಬಹುದೊಡ್ಡ ಅನ್ಯಾಯ ಮಾಡುತ್ತಿದೆ, 2023 ರಲ್ಲಿ ಎಸ್‌ಸಿಪಿ ಅಡಿಯಲ್ಲಿ 7713.15 ಕೋಟಿ ರೂ. ಹಾಗೂ ಟಿಎಸ್‌ಪಿ ಅಡಿ 3430.85 ಕೋಟಿ ರೂ. ಸೇರಿದಂತೆ ಒಟ್ಟು 11144 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿರುವುದು ಅನ್ಯಾಯವಲ್ಲದೇ ಮತ್ತೇನು ಎಂದು ಪ್ರಶ್ನಿಸಿದರು. ಇದಕ್ಕೆ ಪ್ರಬಲ ವಿರೋಧ ವ್ಯಕ್ತವಾದರೂ ಸಹ ಸರ್ಕಾರ ತನ್ನ ಚಾಳಿ ಮುಂದುವರೆಸಿ 2024ರಲ್ಲಿಯೂ ಸಹ ಎಸ್‌ಸಿಪಿ ಅಡಿಯಲ್ಲಿ 9980.66 ಕೋಟಿ ರೂ ಹಾಗೂ ಟಿಎಸ್‌ಪಿ ಅಡಿಯಲ್ಲಿ 4302 ಕೋಟಿ ರೂ. ಸೇರಿದಂತೆ ಒಟ್ಟು 14282.68 ಕೋಟಿ ರೂ. ಬಳಕೆ ಮಾಡಿಕೊಂಡು ಮತ್ತೊಮ್ಮೆ ಘೋರ ಅನ್ಯಾಯವೆಸಗಿದೆ ಎಂದು ದೂರಿದರು.

ಉಳಿದ ವರ್ಗದವರಿಗೆ ಸರ್ಕಾರದ ಖಜಾನೆಯಿಂದ ಅನುದಾನ ಬಿಡುಗಡೆಯಾಗುತ್ತಿದೆ. ಆದರೆ ದಲಿತ ಬಾಂಧವರಿಗೆ ಈ ಯೋಜನೆಯ ಹಣವನ್ನೇ ಗ್ಯಾರಂಟಿ ಯೋಜನೆಗೂ ನೀಡಿದರೆ ಹೇಗೆ ಇದು ಅವೈಜ್ಞಾನಿಕ ಅಷ್ಟೇ ಅಲ್ಲ. ಅನ್ಯಾಯವೂ ಸಹ ಹೌದು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ರಾಜ್ಯ ಸರ್ಕಾರ ದಲಿತ ಬಾಂಧವರ ಬಗ್ಗೆ ಮೊಸಳೆ ಕಣ್ಣೀರು ಸುರಿಸುತ್ತಿದೆ. ಕೇವಲ ಮಾತಿನಲ್ಲಿ ದಲಿತಪರ ಎಂದು ಹೇಳುತ್ತಿದೆ ಹೊರತು ದಲಿತ ಸಮುದಾಯಗಳ ಅಭಿವೃದ್ಧಿ ಯೋಜನೆಯ ಹಣವನ್ನು ದುರಪಯೋಗಮಾಡಿ ದಲಿತ ವಿರೋಧಿ ಎಂಬುದನ್ನು ಕಾಂಗ್ರೆಸ್ ಸಾಬೀತುಪಡಿಸಿದೆ ಎಂದು ದೂರಿದರು.

ಅಲ್ಪಸಂಖ್ಯಾತರಿಗೆ ಪ್ರತ್ಯೇಕವಾದ ಅನುದಾನವನ್ನು ಕಾಯ್ದಿರಿಸಲಾಗಿದೆ, ಈ ಪಂಚ ಗ್ಯಾರಂಟಿ ಯೋಜನೆಗಳಿಗೆ ಈ ಅನುದಾನ ಬಳಕೆ ಮಾಡುತ್ತಿಲ್ಲ. ಆದರೆ ದಲಿತ ಬಾಂಧವರಿಗೆ ಗ್ಯಾರಂಟಿ ಯೋಜನೆಗಳಿಗೆ ನೀಡುವಾಗ ದಲಿತರ ಶ್ರೇಯೋಭಿವೃದ್ಧಿಗಾಗಿ ಇರಿಸಿದ ಅನುದಾನ ಬಳಕೆ ಮಾಡುತ್ತಿದೆ. ಇದು ಯಾವ ಸೀಮೆಯ ನ್ಯಾಯ ಎಂದು ಅಂಗಡಿ ಖಾರವಾಗಿ ಪ್ರಶ್ನಿಸಿದರು.

ಬಿಜೆಪಿ ಯುವ ಮುಖಂಡ ಮಹೇಂದ್ರಕುಮಾರ ನಾಯಕ ಮಾತನಾಡಿ, ಕಾಂಗ್ರೆಸ್ ದಲಿತ ವಿರೋಧಿ ಇಂದು ನಿನ್ನೆಯದಲ್ಲ. ಕೇವಲ ಬಾಯಿಮಾತಿನಲ್ಲಿ ದಲಿತಪರ ಎಂದು ಹೇಳುವ ಕಾಂಗ್ರೆಸ್‌ಗೆ ದಲಿತರ ಮೇಲೆ ಎಳ್ಳಷ್ಟೂ ಕಾಳಜಿ ಇಲ್ಲ ಎಂದರು.

ಎಸ್.ಸಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ, ಪ್ರಮುಖರಾದ ರವಿ ವಗ್ಗೆ, ಮಂಜುನಾಥ ಮೀಸೆ, ಭರತ ಕೋಳಿ, ಎಸ್.ಎ.ಪಾಟೀಲ, ಶಿಲ್ಪಾಕುದರಗುಂಡ, ಬಸವರಾಜ ಬೈಚಬಾಳ, ಉಮೇಶ ಕೋಳಕೂರ, ಸಾಬು ಮಾಶ್ಯಾಳ, ಶ್ರೀಹರಿ ಗೊಳಸಂಗಿ ಸಂಜಯಪಾಟೀಲ್ ಕನಮಡಿ, ವಿಜಯ ಜೋಶಿ, ವಿಕಾಸ್ ಪದಕಿ, ಮಲ್ಲಿಕಾರ್ಜುನ ದೇವರಮನಿ, ಗುರು ತಳವಾರ, ಸಿದ್ದು ಮಖಣಾಪೂರ, ಮಲ್ಲಮ್ಮ ಜೋಗೂರ, ರಾಜಕುಮಾರ ಸಗಾಯಿ, ಅಶೋಕ ರಾಠೋಡ, ವಿನೋದಕುಮಾರ ಮಣೂರ, ಪ್ರಶಾಂತ ಪವಾರ, ವಿನೋದ ಕೋಳೂರ, ಶರತಸಿಂಗ್ ರಜಪೂತ, ವಿನಯ ಬಬಲೇಶ್ವರ, ಶೀಲವಂತ ಉಮರಾಣಿ, ರಾಜೇಶ ತಾವಸೆ, ಮಂಜುಳಾ, ನಾಗರಾಜ ಪಾಟೀಲ, ಕಾಂತು ಶಿಂಧೆ, ಸಂದೀಪ್ ಪಾಟೀಲ ಪಾಲ್ಗೊಂಡಿದ್ದರು.

# ವಿಜಯಪುರದಲ್ಲಿ ಧಾರಾಕಾರ ಮಳೆ: ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಜನ ಜೀವನ ಅಸ್ತವ್ಯಸ್ತ

**ವಿಜಯಪುರ :** ಜಿಲ್ಲೆಯಲ್ಲಿ ಮತ್ತೆ ಶುಕ್ರವಾರ ಸಂಜೆ ಧಾರಾಕಾರ ಮಳೆ ಸುರಿದಿದ್ದು, ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಜನ ಜೀವನ ಅಸ್ತವ್ಯಸ್ತವಾಗಿದೆ.

ಕಳೆದ ಎರಡು ದಿನಗಳಿಂದ ಧಾರಾಕಾರವಾಗಿ ಮಳೆ ಸುರಿದು ಜನರು ತೀವ್ರ ತೊಂದರೆ ಅನುಭವಿಸಿದ್ದರು. ಈ ಮಧ್ಯೆ ಒಂದು ದಿನ ಮಾತ್ರ ಮಳೆ ನಿಂತು ಜನರು ಸೂರ್ಯನ ಮುಖ ಕಂಡಿದ್ದರು.

ಶುಕ್ರವಾರ ಸಂಜೆ ನಗರ ಸೇರಿದಂತೆ ಮತ್ತೆ ಜಿಲ್ಲೆಯಾದ್ಯಂತ ಧಾರಾಕಾರವಾಗಿ ಮಳೆ ಸುರಿದಿದ್ದು, ಸತತ ಒಂದು ಗಂಟೆಗೂ ಹೆಚ್ಚು ಕಾಲ ನಗರದಲ್ಲಿ ಧಾರಾಕಾರ ಮಳೆ ಸುರಿದು ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದೆ.

ಸ್ಟೇಷನ್ ರಸ್ತೆ, ಶಾಪೇಟೆ, ರಾಮ ನಗರ, ಫಿರದೋಸ್ ನಗರ, ಗಣೇಶ ನಗರ, ಲಕ್ಷ್ಮಣ ನಗರ ಹಾಗೂ ಇತರೆ ಪ್ರದೇಶಗಳಲ್ಲಿ ಮಳೆ ನೀರಿನ ಅಬ್ಬರ ಹೆಚ್ಚಾಗಿ ರಸ್ತೆಗಳೆಲ್ಲ ಜಲಾವೃತಗೊಂಡಿವೆ.

ತಗ್ಗು ಪ್ರದೇಶದ ಮನೆಗಳಲ್ಲಿ ಮಳೆ ನೀರು ಮನೆಗಳಿಗೆ ನುಗ್ಗಿ ಅವಾಂತರ ಸೃಷ್ಟಿಸಿದೆ.

ಮನೆಗಳಲ್ಲಿದ್ದ ಪಡಿತರ ದಿನಸಿ ಹಾಗೂ ಇತರೆ ವಸ್ತುಗಳು ಮಳೆ ನೀರು ಪಾಲಾಗಿವೆ.

ಮನೆಗಳಿಗೆ ಹೊಕ್ಕ ನೀರು ಹೊರ ಹಾಕಲು ಜನರು ಹರ ಸಾಹಸ ಮಾಡಬೇಕಾಯಿತು. ಜನರಿಗೆ ರಾತ್ರಿ ನಿದ್ರೆ ಇಲ್ಲದೆ ಜಾಗರಣೆ ಮಾಡುವಂತಾಯಿತು. ಜನ ಜೀವನ ಅಸ್ತವ್ಯಸ್ತವಾಗಿ ಜನರು ಗೋಳಿಡುವಂತಾಯಿತು.

ರಾತ್ರಿ ಸುರಿದ ಧಾರಾಕಾರ ಮಳೆಯಿಂದ ಡೋಣಿ ನದಿ ತೀರದಲ್ಲಿ ಪ್ರವಾಹದ ಆತಂಕ ಹೆಚ್ಚಿದೆ. ಈಗಾಗಲೇ ಡೋಣಿ ನದಿಗೆ ಭಾರಿ ಪ್ರಮಾಣದ ನೀರು ಹರಿದು ಬಂದು ಕೆಲ ಸೇತುವೆಗಳು ಜಲಾವೃತಗೊಂಡಿವೆ.

ಮೋಡ ಕವಿದ ವಾತಾವರಣವಿದ್ದು, ಮತ್ತಷ್ಟು ಮಳೆಯಾಗುವ ಸಾಧ್ಯತೆ ಇದೆ.

# ಸುಮಾರು 6 ಕೀಲೋ ಮೀಟರ್ ವರೆಗೆ ನಿಂತ ವಾಹನ ದಟ್ಟನೆ



**ತಾಳಿಕೋಟೆ :** ಡೋಣಿ ನಧಿಯ ಪ್ರವಾಹದಿಂದ ವಿಜಯಪುರ ರಸ್ತೆಯ ಕೆಳಮಟ್ಟದ ಸೇತುವೆ ಜಲಾವೃತವಾಗಿರುವದು ಒಂದು ಕಡೆಯಾದರೆ ಹಡಗಿನಾಳ ಗ್ರಾಮದ ಮೂಲಕ

ಮೂಲಕ ಸಂಚರಿಸುವ ಮೂಕೀಹಾಳ ಗ್ರಾಮದ ಹತ್ತಿರದ ಹಳ್ಳದಲ್ಲಿಯೂ ಶುಕ್ರವಾರ ಸಾಯಂಕಾಲ ಪ್ರವಾಹದ ಉಕ್ಕಿ ಬಂದಿದ್ದರಿಂದ ಸಂಪೂರ್ಣ ಸಂಚಾರ ವ್ಯವಸ್ಥೆಯೇ ಕಡಿತಗೊಂಡ ಪರಿಣಾಮ ತಾಳಿಕೋಟೆಯಿಂದ ಮೂಕೀಹಾಳ ಗ್ರಾಮದ ಹಳ್ಳದ ವರೆಗಿನ 6 ಕೀಲೋ ಮೀಟರ್ ವಾಹನಗಳ ದಟ್ಟನೆ ನಿಂತಲ್ಲೇ ನಿಂತುಕೊಂಡಿವೆ. ಅತ್ತವೂ ವಿಜಯಪುರ ಹಾಗೂ ಮುದ್ದೇಬಿಹಾಳ ಮಾರ್ಗದ ಕಡೆಯಿಂದ ಆಗಮಿಸಿದ ವಾಹನಗಳೂ ಸಹ ಸುಮಾರು 5 ಕೀಲೋ ಮೀಟರ್‌ವರೆಗೆ ನಿಂತಿದ್ದರೆ ಇತ್ತ ಮಿಣಜಗಿ ಕಡೆಯ 3 ಕೀಲೋ ಮೀಟರ್ ವರೆಗೆ ವಾಹನಗಳು ನಿಂತುಕೊಂಡಿದ್ದವು. ಕೆಲವರು ಈ ಸಂಚಾರ ಸಂಪರ್ಕ ಕಡಿತಗೊಂಡಿರುವ ಸುದ್ದಿಯನ್ನು ಅರೀತುಕೊಂಡ ಖಾಸಗಿ ವಾಹನದೊಂದಿಗೆ ಸುಮಾರು 80 ಕೀಲೋ ಮೀಟರ್ ಅಂತರದ ಕೊಡೇಕಲ್ಲ, ನಾರಾಯಣಪೂರ, ನಾಲತವಾಡ ಮೂಲಕ ಮುದ್ದೇಬಿಹಾಳದ ಸಂಪರ್ಕವನ್ನು ಪಡೆದುಕೊಂಡರೆ ಇನ್ನೂ ಕೆಲವರು ದೇವರ ಹಿಪ್ಪರಗಿ ಮೂಲಕ 140 ಕೀಲೋ ಮೀಟರ್ ಅಂತರದಿಂದ ವಿಜಯಪುರ ನಗರವನ್ನು ಸಂಪರ್ಕಕ್ಕೆ ಪಡೆದುಕೊಂಡರು.

ಈ ಪ್ರವಾಹದ ದಟ್ಟನೆ ಅರೀಯದೇ ಆಗಮಿಸಿದ್ದ ಮುದ್ದೇಬಿಹಾಳದ ನ್ಯಾಯವಾದಿಗಳಾದ ಎಂ.ಎನ್.ಯರಗಲ್ಲ, ಪಿ.ಬಿ.ಜಾಧವ, ಎಸ್.ಸಿ.ಹಿರೇಮಠ, ಎನ್.ಆರ್.ಮೋಕಾಸಿ ಅವರು ಸುಮಾರು 80 ಕೀಲೋ ಮೀಟರ್ ಅಂತರದಿಂದ ಮುದ್ದೇಬಿಹಾಳಕ್ಕೆ ತೆರಳಿದರಲ್ಲದೇ ಈ ರಸ್ತೆ ಸಂಪರ್ಕ ಚ್ಯಾಲ ಇದ್ದರೆ ಕೇವಲ 30 ಕೀಲೋ ಮೀಟರ್‌ದಲ್ಲಿ ಮುದ್ದೇಬಿಹಾಳಕ್ಕೆ ಹೋಗುತ್ತಿದ್ದೇವೆಂದು ಪತ್ರಿಕೆಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡರಲ್ಲದೇ ಈ ನಧಿಗೆ ಮೇಲ್ಮಟ್ಟದ ಸೇತುವೆಯನ್ನು ತ್ವರಿತಗತಿಯಲ್ಲಿ ನಿರ್ಮಾಣ ಮಾಡಿ ಜನರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕೆಂದು ಒತ್ತಾಯಿಸಿದರು.

# ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ: ಶಾಸಕ ಮೇಟಿ



**ಕಮತಗಿ :** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಹಾಗೂ ಜಿಲ್ಲಾ ಪಂಚಾಯತ್ ಬಾಗಲಕೋಟೆ ವತಿಯಿಂದ 2023–24ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಪಟ್ಟಣದ ವಿವಿಧ ಸಮುದಾಯ ಭವನಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಎಚ್.ವೈ. ಮೇಟಿ ಭೂಮಿ ಪೂಜೆ ನೆರವೇರಿಸಿದರು. ಪಟ್ಟಣದ ಪಾರ್ವತಿ ಪರಮೇಶ್ವರ ಹಠಗಾರ ಸಮಾಜದ ಸಮುದಾಯ ಭವನಕ್ಕೆ 80 ಲಕ್ಷ, ದೇವಾಂಗ ಸಮಾಜದ ಸಮುದಾಯ ಭವನಕ್ಕೆ 15 ಲಕ್ಷ, ಅಂಜುಮನ್ ಇಸ್ಲಾಂ ಕಮಿಟಿ, ಗಂಗಾಮಾತೆ ಸಮಾಜ, ಕುಂಬಾರ ಸಮಾಜ, ಬಣಜಿಗ ಸಮಾಜ, ವಿನಾಯಕ ತರುಣ ಸಂಘ, ಡಿವಿಜನ್ ನಂ. 1 ಹನಮಂತ ದೇವರ ದೇವಸ್ಥಾನ, ದ್ಯಾಮವ್ವ ದೇವರ ದೇವಸ್ಥಾನ, ಬಸವೇಶ್ವರ ದೇವಸ್ಥಾನ, ಹಾಗೂ ಪಟ್ಟಣದ ಆಸ್ತಿ ನಂ. 1529ರಲ್ಲಿ ಪಾರ್ವತಿ ಪರಮೇಶ್ವರ (ಹಠಗಾರ) ಕ್ಷೇಮಾಭಿವೃದ್ಧಿ ಸಂಘದ ಸಮುದಾಯ ಭವನ ಸೇರಿದಂತೆ ತಲಾ 10 ಲಕ್ಷ ರೂ. ಅನುದಾನ ಮಂಜೂರಾಗಿದೆ.

ಒಟ್ಟು ಅಂದಾಜು ವೆಚ್ಚ 185 ಲಕ್ಷ ರೂ. ನಿರ್ಮಾಣ ಕಾರ್ಯ ಕೆ.ಆರ್.ಐ.ಡಿ.ಎಲ್. ಬಾಗಲಕೋಟೆ ಮೂಲಕ ನಡೆಯಲಿದೆ.

ಶಾಸಕಮೇಟಿಅವರಅನುದಾನದಡಿ ನಾಗೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನಕ್ಕೆ 5.30 ಲಕ್ಷ, ಯಲ್ಲಾಲಿಂಗ ದೇವಸ್ಥಾನದ ಹತ್ತಿರ ಸಮುದಾಯ ಭವನಕ್ಕೆ 5 ಲಕ್ಷ, ಬೀರೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನಕ್ಕೆ 10 ಲಕ್ಷ, ಹಾಗೂ ಕಮತಗಿಯ ಪಂಡಿತ ಪುಟ್ಟರಾಜ ಗವಾಯಿ ಸಂಗೀತ ಪಾಠಶಾಲೆಗೆ 1.25 ಲಕ್ಷ ರೂ. ಅನುದಾನದಲ್ಲಿ ಕಾಮಗಾರಿಗಳ ಭೂಮಿ ಪೂಜೆ ನೆರವೇರಿಸಿದರು.

ಮೇಟಿ ಪರವಾಗಿ ಮಾತನಾಡಿದ ಮುಖಂಡ ಹೊಳಬಸು ಶೆಟ್ಟರ ಅವರು, ಎಸ್.ಟಿ.ಪಿ. ಅಡಿಯಲ್ಲಿ ಮಲತ್ಯಾಜ್ಯ ನಿರ್ವಹಣ ಘಟಕ (3.50 ಕೋಟಿ), ನೀರು ಸಂಸ್ಕರಣ ಘಟಕ (2.50 ಕೋಟಿ), ಪಟ್ಟಣ ಪಂಚಾಯಿತಿ ನೂತನ ಕಟ್ಟಡ (5 ಕೋಟಿ), ಎಸ್.ಎಫ್.ಸಿ. ವಿಶೇಷ ಅನುದಾನ (10 ಕೋಟಿ), ಇಂದಿರಾ ಕ್ಯಾಂಟೀನ್ ಕಟ್ಟಡ (90 ಲಕ್ಷ), ಒಳಚರಂಡಿ ವ್ಯವಸ್ಥೆ (50 ಕೋಟಿ) ಸೇರಿದಂತೆ ಹಲವು ಯೋಜನೆಗಳನ್ನು ಕಮತಗಿಗೆ ಮಂಜೂರು ಮಾಡಿರುವುದಾಗಿ ತಿಳಿಸಿದರು. "ಕಮತಗಿಯ ಮಸಾರಿ ರಸ್ತೆಯಲ್ಲಿ ಚೆಕ್ಡ್ಯಾಂ ನಿರ್ಮಾಣದ ಅವಶ್ಯಕತೆ ಇದೆ. ಸಂಬಂಧಿಸಿದ ಅಧಿಕಾರಿಗಳನ್ನು ಕರೆಸಿ ಅದು ಸರ್ಕಾರಿ ಜಾಗವಿದ್ದರೆ ತಕ್ಷಣ ಸರ್ವೆ ಮಾಡಲಾಗುವುದು. ಖಾಸಗಿ ಜಮೀನಾದರೆ ಭೂಮಾಲೀಕರನ್ನು ಮನವೊಲಿಸಿ ಚೆಕ್ಡ್ಯಾಂ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು," ಎಂದರು.

"ಈ ಕಾಮಗಾರಿಗಳು ಸಂಪೂರ್ಣ ಆಗುವವರೆಗೆ ಅಗತ್ಯವಿದ್ದರೆ ಹೆಚ್ಚುವರಿ ಅನುದಾನ ತರಲು ಪ್ರಯತ್ನಿಸಲಾಗುವುದು.

ಕಮತಗಿಯ ಸಮಗ್ರ ಅಭಿವೃದ್ಧಿ ನಮ್ಮ ಆದ್ಯತೆ," ಎಂದು ಹೊಳಬಸು ಶೆಟ್ಟರ ಭರವಸೆ ನೀಡಿದರು.

ಹೊಳೆ ಹುಚ್ಚೇಶ್ವರ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಬಸವರಾಜ ಕುಂಬಳಾವತಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷರು, , ಮುಖ್ಯಾಧಿಕಾರಿಗಳು, ಚುನಾಯಿತ ಸದಸ್ಯರು, ಕಾಂಗ್ರೆಸ್ ಪಕ್ಷ ಹಿರಿಯ ಮುಖಂಡರು, ಸೇರಿದಂತೆ ಸಿಬ್ಬಂದಿ ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

# ನರಿಬೋಳ–ಚಾಮನೂರು ಭೀಮಾ ಸೇತುವೆ ಬಾಕಿ ಕಾಮಗಾರಿ ಶೀಘ್ರ ಪೂರ್ಣ



**ಕಲಬುರಗಿ :** ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲೂಕಿನ ನರಿಬೋಳಿ ಗ್ರಾಮ ಮತ್ತು ಚಿತ್ತಾಪುರದ ಚಾಮನೂರು ಗ್ರಾಮಕ್ಕೆ ಸಂಪರ್ಕಿಸುವ ನರಿಬೋಳಿ–ಚಾಮನೂರು ಸೇತುವೆಯ ಬಾಕಿ ಶೇ. 30 ರಷ್ಟಿರುವ ಕಾಮಗಾರಿ ಮುಕ್ತಾಯಕ್ಕೆ ಅಗತ್ಯವಾಗಿರುವ 37 . 60 ಕೋಟಿ ರು ಅನುದಾನ ಶೀಘ್ರ ಯಾವುದಾದರೂ ಯೋಜನೆಯಲ್ಲಿ ಹೊಂದಿಸಿಕೊಡುವ ಮೂಲಕ ನೆನೆಗುದಿಗೆ ಬಿದ್ದಿರುವ ಸೇತುವೆ ಕಾಮಗಾರಿ ಕೈಗೂಡುವಂತೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಲೋಕೋಪಯೋಗಿ ಖಾತೆ ಸಚಿವ ಸತೀಶ ಜಾರಕಿಹೊಳಿ ಸದನದಲ್ಲಿಂದು ಭರವಸೆ ನೀಡಿದ್ದಾರೆ.

ಜೇವರ್ಗಿ ಶಾಸಕರು, ಕೆಕೆಆರ್ಡಿಬಿ ಅಧ್ಯಕ್ಷರಾಗಿರುವ ಡಾ. ಅಜಯ್ ಧರ್ಮಸಿಂಗ್ ಅವರು ಈ ಕಾಮಗಾರಿ ಕುರಿತಂತೆ ಕೇಳಿದ ಚುಕ್ಕೆ ಗುರಿತಿನ ಪ್ರಶ್ನೆಗೆ ಸದನದ ಮೊದಲ ದಿನ ಉತ್ತರಿಸಿದ ಸಚಿವರು, ಆಗಲೇ ನರಿಬೋಳಿ ಗ3?ಮಸ್ಥರೊಂದಿಗೆ ಶಾಸಕರು ತಮ್ಮ ಗಮನ ಸೆಳೆದಿದ್ದಾರೆ. ಆದಷ್ಟು ಬೇಗ ಯಾವುದಾದರೂ ಯೋಜನೆಯಲ್ಲಿ ಅಗತ್ಯ ಅನುದಾನ ಮೊತ್ತ ಹೊಂದಿಸುವ ಮೂಲಕ ಸದರಿ ಕಾಮಗಾರಿ ಪೂರ್ಣಗೊಳಿಸಲಾಗುತ್ತದೆ ಎಂದು ಸಚಿವ ಜಾರಕಿಹೊಳಿ ಹೇಳಿದರು.

ಇದಕ್ಕೂ ಮೊದಲು ಕೆಕೆಆರ್ಡಿಬಿ ಅಧ್ಯಕ್ಷರು ಹಾಗೂ ಜೇವರ್ಗಿ ಶಾಸಕರಾದ ಡಾ. ಅಜಯ್ ಧರ್ಮಸಿಂಗ್ ಅವರು ಸದನದ ಮೊದಲ ದಿನವಾದ ಸೋಮವಾರ ಈ ವಿಚಾರವನ್ನ ಗಂಭೀರವಾಗಿ ಪ್ರಸ್ತಾಪಿಸುತ್ತ ಕಾಮಗಾರಿ ಶೇ. 70 ರಷ್ಟು ಮುಗಿದಿದೆ. ಇನ್ನೇನು 3 ಕಂಬಗಳು ಪೂರ್ಣಗೊಂಡಲ್ಲಿ ಸೇತುವೆ ಜನಕ್ಕೆ ಉಪಯೋಗವಾಗಲಿದೆ. ಈ ಸೇತುವೆ ಕಾಮಗಾರಿ ನೆನೆಗುದಿಗೆ ಬಿದ್ದಿದ್ರಿಂದ ಈ ಬಾಗದ ಜನತೆಗೆ ತುಂಬ ತೊಂದರೆಯಾಗುತ್ತಿದೆ ಎಂದು ಸದನದ ಗಮನ ಸೆಳೆದರು.

ಈಗಾಗಲೇ ಪಿಡಬ್ಲೂಡಿ ಸಚಿವರಾದ ಸತೀಶ ಜಾರಕಿಹೊಳಿ ಅವರಿಗೆ ಕಂಡು 37 ಕೋಟಿ ರು ಅನುದಾನ ಒದಗಿಸುವ ಮೂಲಕ ಸದರಿ ಕಾಮಗಾರಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡುವಂತೆ ಆಗ್ರಹಿಸಿದ್ದೇನೆ. 2017 ರಲ್ಲೇ ಈ ಕಾಮಗಾರಿಗೆ 50 ಕೋಟಿ ರು ಮಂಜೂರಾತಿ ನೀಡಲಾಗಿತ್ತು. ಈ ಸೇತುವೆ ಕಾಮಗಾರಿಗೆ ಸಂಬಂಧಪಟ್ಟಂತೆ ನರಿಬೋಳದಲ್ಲಿ 12. 29 ಎಕರೆ, ಚಾಮನೂರಲ್ಲಿ 10. 32 ಎಕರೆ ರೈತರ ಜಮೀನು ಸ್ವಾಧೀನ ಪ್ರಕ್ರಿಯೆ ಚಾಲ್ತಿಯಲ್ಲಿದೆ. ರೈತರಿಗೆ ಯಾವುದೇ ತೊಂದರೆಯಾಗದಂತೆ ಭೂ ಸ್ವಾಧೀನದ ಈ ಕೆಲಸವೂ ತ್ವರಿತವಾಗಬೇಕು ಎಂದು ಡಾ. ಅಜಯ್ ಸಿಂಗ್ ಅವರು ಸಚಿವರ ಗಮನ ಸೆಳೆದರು.

48 ಕೋಟಿ ರು ವೆಚ್ಚದಲ್ಲಿ ಹೈದ್ರಾಬಾದ್ ಗುತ್ತಿಗೆದಾರ ಇದನ್ನು ಟೆಂಡರ್ ಪಡೆದು ಅರೆಬರೆ ಮಾಡಿ ಬಿಟ್ಟು ಹೋಗಿದ್ದಾನೆ. ಈ ಸಮಸ್ಯೆಗೆ ಬೇಗ ಪರಿಹಾರ ನೀಡಬೇಕಿದೆ. ರೈತರ ಭೂ ಸ್ವಾಧೀನ ಕೂಡಾ ರೈತರ ಬೇಡಿಕೆಯಂತೇ ಸರಕಾರ ನಡೆಸಲಿ ಎಂದು ಡಾ. ಅಜಯ್ ಸಿಂಗ್ ಆಗ್ರಹಿಸಿದರು.

ನರಿಬೋಳ–ಚಾಮನೂರುಸೇತುವೆಯಕಾಮಗಾರಿಗೆ 37. 60 ಕೋಟಿ ರು ಅನುದಾನ ಅಗತ್ಯವಿದೆ. ಪಿಡಬ್ಲೂಡಿ ಈಅನುದನ ಹೊಂದಿಸುವ ಮೂಲಕ ಜನರ ಬಹು ವರ್ಷಗಳ ಬೇಡಿಕೆ ಈಡೇರಿಸಬೇಕು ಎಂದು ಆಗ್ರಹಿಸಿದ್ದರು.

ಹೊನ್ನಾಳ– ತಿನ್ನೂರ ಸೇತುವೆ ಕೂಡಾ ನೆನೆಗುದಿಗೆ

ಇದೇ ಸಂದ್ರಭದಲ್ಲಿ ಡಾ. ಅಜಯ್ ಸಿಂಗ್ ಅವರು ತಮ್ಮ ಕ್ಷೇತ್ರದಲ್ಲಿ ಬರುವ ಹೊನ್ನಾಳ– ತಿನ್ನೂರ ಸೇತುವೆ ಕೂಡಾ ನೆನೆಗುದಿಗೆ ಬಿದ್ದಿದೆ.

ನೆನೆಗುದಿಗೆ ಬಿದ್ದಿರುವ ಈ ಸೇತುವೆ ಕಾಮಗಾರಿಯಿಂದಾಗಿ

ಇಲ್ಲಿಯೂ ಭಾರಿ ತೊಂದರೆ ಜನ ಎದುರಿಸುತ್ತಿದ್ದಾರೆ. ಈ ಕಾಮಗಾರಿಗೂ ಅಗತ್ಯ ಅನುದಾನ ಒದಗಿಸುವಂತೆ ಶಾಸಕರಾದ ಡಾ. ಅಜಯ್ ಸಿಂಗ್ ಧರ್ಮಸಿಂಗ್ ಅವರು ಸದನದ ಗಮನ ಸೆಳೆದರು.

# ಹಿಂದು ಸಹೋದರಿಯರಿಂದ ಮುಸ್ಲಿಂ ಸಹೋದರರಿಗೆ ರಾಖಿ ಪದ್ಮಶಾಲಿ ಸಮಾಜದ ವತಿಯಿಂದ ಸೌಹಾರ್ದ ಸಂಬಂಧ

**ಇಳಕಲ್ :** ಇಲ್ಲಿನ ಮಾರ್ಕಂಡೇಶ್ವರ ದೇವಸ್ಥಾನದಲ್ಲಿ ಹಿಂದೂ ಧರ್ಮದ ಪದ್ಮಶಾಲಿ ಸಮಾಜದ ಮಹಿಳೆಯರು ಮುಸ್ಲಿಂ ಸಹೋದರರಿಗೆ ರಾಖಿ ಕಟ್ಟುವ ಮೂಲಕ ಕೋಮು ಸೌಹಾರ್ದತೆಯನ್ನು ಮೆರೆದರು.

ಶನಿವಾರದಂದು ಪದ್ಮಶಾಲಿ ಸಮಾಜದ ಸಹೋದ–ರಿಯರು ಸರ್ವಾಲಂಕೃತರಾಗಿ ದೇವಸ್ಥಾನಕ್ಕೆ ಆಗಮಿಸಿ ಅಲ್ಲಿ ಸೇರಿದ್ದ ಮುಸ್ಲಿಂ ಬಾಂಧವರಿಗೆ ರಾಖಿ ಕಟ್ಟಿದಾಗ ಜಾತಿ ಜಾತಿ ಎಂದು ಯಾಕೆ ಬಡದಾಡುತಿಯೋ ಅಧಮ ಎಂಬ ಹಾಡು ನೆನಪಿಗೆ ಬಂತು.

ಪದ್ಮಶಾಲಿ ಸಮಾಜದ ಮುಖಂಡರು ಏರ್ಪಡಿಸಿದ್ದ ಈ ಕೋಮು ಸಾಮರಸ್ಯದ ರಾಖಿ ಹಬ್ಬ ದೇಶದ ಇತರ ನಗರ ಪಟ್ಟಣಗಳಿಗೆ ಮಾದರಿ ಆಗಿತ್ತು ಎಂದರೆ ಅತಿಶಯೋಕ್ತಿಯಲ್ಲ.



# ಗಾನಯೋಗಿ ಪಂಚಾಕ್ಷರಿ ಗವಾಯಿಗಳ 81ನೇ ಪುಣ್ಯ ಸ್ಮರಣೆ

**ಬಳ್ಳಾರಿ :** ಪಂಡಿತ್ ಪಂಚಾಕ್ಷರಿ ಗವಾಯಿಗಳು ಅಂದರಾಗಿದ್ದರು ಸಹ ಹಾಗನಲ್ ಕುಮಾರಸ್ವಾಮಿಗಳ ಆರ್ಶಿವಾದ ಪಡೆದು ಸಂಗೀತದಲ್ಲಿ ಸಾಧಿಸಿ ಸಾವಿರಾರು ಅಂದ ಮಕ್ಕಳಿಗೆ ಸಂಗೀತದ ಮೂಲಕ ಅವರ ಬಾಳಿಗೆ ಬೆಳಕಾದರು. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳಂತ ಶ್ರೇಷ್ಟ ಶಿಷ್ಯರನ್ನು ಸಮಾಜಕ್ಕೆ ನೀಡಿದರು. ಇಂತಹ ಮಹಾತ್ಮರ ನಿಸ್ವಾರ್ಥ ಸೇವೆಯನ್ನು ನೆನೆಯುವುದೇ ಒಂದು ಪುಣ್ಯದ ಕೆಲಸ ಎಂದು ಜಗದೀಶ್ ಅಭಿಪ್ರಾಯ ಪಟ್ಟರು. ಅವರು ಇಂದು ನಗರದ ಬಾಲ ಭಾರತಿ ಶಾಲೆಯಲ್ಲಿ ನಮ್ಮ ಗಾನಯೋಗಿ ಪಂಚಾಕ್ಷರಿ ಗವಾಯಿ ಟ್ರಸ್ಟ್ ವತಿಯಿಂದ ಶ್ರೀ ಗಾನಯೋಗಿ ಶಿವಯೋಗಿ ಪಂಡಿತ ಪಂಚಾಕ್ಷರಿ ಗವಾಯಿಗಳ 81ನೇ ಪುಣ್ಯ ಸ್ಮರಣೆಯನ್ನು ಪೂಜ್ಯರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ದರೂರು ಪುರುಷೋತ್ತಮಗೌಡ ಮಾತನಾಡಿ ಸಂಗೀತ ಕ್ಷೇತ್ರಕ್ಕೆ ಪೂಜ್ಯರ ಕೊಡುಗೆ ಬಹಳ ದೊಡ್ಡದು ಬಳ್ಳಾರಿ ಜಿಲ್ಲೆಯ ಹಲವಾರು ಸಂಗೀತಗಾರರು ಪೂಜ್ಯರು ಸ್ಥಾಪಿಸಿದ ಶ್ರೀ ವಿರೇಶ್ವರ ಪುಣ್ಯಶ್ರಮದಲ್ಲಿ

ಸಂಗೀತ ಕಲಿತು ಸಾಧನೆ ಮಾಡಿದ್ದಾರೆ. ಪೂಜ್ಯರ ಪರೋಪಕರ ಗುಣ ಎಲ್ಲಾರಿಗೂ ಆದರ್ಶವಾಗಿದೆ ಎಂದು ತಿಳಿಸಿದರು.

**"SIHI KAHI"** Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

Designed by MKG-9535762618